# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 584(607)
ಮಾನ್ಯ ಸದಸ್ಯರ ಹೆಸರು: ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
ಉತ್ತರಿಸಬೇಕಾದ ದಿನಾಂಕ: 22.07.2024.

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳೆಷ್ಟು: (ಜಿಲ್ಲಾವಾರು ವಿವರ ನೀಡುವುದು).</td><td>ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆಯ ವಿವರಗಳು ಈ ಕೆಳಕಂಡಂತಿದೆ:-
<table>
<tr><td>ಸರ್ಕಾರಿ ಪ್ರಾಥಮಿಕ ಶಾಲೆಗಳು</td><td>41,905</td></tr>
<tr><td>ಸರ್ಕಾರಿ ಪ್ರೌಢ ಶಾಲೆಗಳು</td><td>4,850</td></tr>
<tr><td>ಒಟ್ಟು</td><td>46,755</td></tr>
</table>
ಜಿಲ್ಲಾವಾರು ವಿವರಗಳನ್ನು ಅನುಬಂಧ-1ರಲ್ಲಿರಿಸಿದೆ.</td></tr>
<tr><td>ಆ)</td><td>ಶಿಕ್ಷಣ ಹಕ್ಕು ಕಾಯ್ದೆಯ 21ನೇ ವಿಧಿ ಪ್ರಕಾರ ಶಾಲೆಗಳಲ್ಲಿ ಶಾಲಾಭಿವೃದ್ಧಿ ಸಮಿತಿಯನ್ನು ರಚಿಸಲು ಸರ್ಕಾರ ಆದೇಶ ಹೊರಡಿಸಿದೆಯೇ: ಆದೇಶ ಹೊರಡಿಸಿದ್ದು, ಯಾವಾಗ: (ಆದೇಶದ ಪ್ರತಿ ಒದಗಿಸುವುದು).</td><td>ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಾಲಾ ಅಭಿವೃದ್ಧಿ ಸಮಿತಿಯನ್ನು ರಚಿಸುವ ಹಾಗೂ ಅದರ ಕಾರ್ಯವಿಧಾನದ ಬಗ್ಗೆ ಹೊರಡಿಸಲಾದ ಆದೇಶಗಳು ಈ ಕೆಳಕಂಡಂತಿವೆ:-
<table>
<tr><th>ಕ್ರ.ಸಂ</th><th>ಸರ್ಕಾರದ ಆದೇಶ ಸಂಖ್ಯೆ ಹಾಗೂ ದಿನಾಂಕ</th><th>ವಿಷಯ</th></tr>
<tr><td>1.</td><td>ಇಡಿ 1 ಪಿಬಿಎಸ್ 2001, ದಿನಾಂಕ: 28.04.2001.</td><td>ಕರ್ನಾಟಕ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ (ಎಸ್ ಡಿಎಂಸಿ) ಗಳನ್ನು ರಚಿಸುವ ಬಗ್ಗೆ.</td></tr>
<tr><td>2.</td><td>ಇಡಿ 105 ಎಸ್ ಒಹೆಚ್ 2008, ದಿನಾಂಕ: 28.07.2009.</td><td>ರಾಜ್ಯದ ಸರ್ಕಾರಿ ಮತ್ತು ಪ್ರೌಢಶಾಲೆಗಳಲ್ಲಿನ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಕಾರ್ಯಗಳ ಬಗ್ಗೆ.</td></tr>
<tr><td>3.</td><td>ಇಡಿ 71 ಎಸ್ಒಹೆಚ್ 2019, ದಿನಾಂಕ: 07.01.2021.</td><td>ಕರ್ನಾಟಕ ರಾಜ್ಯ ಪ್ರೌಢ ಶಾಲೆಗಳು ಹಾಗೂ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರೌಢ ಶಾಲಾ ವಿಭಾಗದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (School Development Monitoring Committee ಎಸ್‌ಡಿಎಂಸಿ) ರಚಿಸುವ ಕುರಿತು.</td></tr>
<tr><td>4.</td><td>ಇಪಿ 142 ಯೋಸಕ 2021, ದಿನಾಂಕ: 26.10.2021.</td><td>ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್ .ಡಿ.ಎಂ.ಸಿ) ರಚನೆ ಕುರಿತು</td></tr>
</table></td></tr>
</table>

<table>
<tr>
<td></td>
<td></td>
<td>
<table>
<tr><td></td><td></td><td>ಮಾರ್ಗಸೂಚಿ ನೀಡುವ ಬಗ್ಗೆ.</td></tr>
<tr><td>5.</td><td>ಇಪಿ 142 ಯೋಸಕ 2021, ದಿನಾಂಕ: 31.01.2022 (ತಿದ್ದುಪಡಿ ಆದೇಶ).</td><td>ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿನ (ಕೆಪಿಎಸ್) ವ್ಯಾಪ್ತಿಯ ವಿಧಾನ ಸಭಾ ಸದಸ್ಯರನ್ನು (ಶಾಸಕರು) ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್ ಡಿಎಂಸಿ)ಯ ಅಧ್ಯಕ್ಷರನ್ನಾಗಿ ನೇಮಿಸುವ ಬಗ್ಗೆ.</td></tr>
</table>
ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿಗಳನ್ನು ರಚಿಸಿರುವ ಬಗೆಗಿನ ಮೇಲ್ಕಂಡ ಆದೇಶದ ಪ್ರತಿಗಳನ್ನು ಅನುಬಂಧ-2 ರಿಂದ 06 ರಲ್ಲಿರಿಸಲಾಗಿದೆ.
</td>
</tr>
<tr>
<td>ಇ)</td>
<td>ಸರ್ಕಾರದ ಈ ಆದೇಶವನ್ನು ಎಲ್ಲಾ ಶಾಲೆಗಳು ಪಾಲಿಸಿವೆಯೇ; ಹಾಗಿದ್ದಲ್ಲಿ ಈವರೆಗೆ ಎಷ್ಟು ಶಾಲೆಗಳು ಶಾಲಾಭಿವೃದ್ಧಿ ಸಮಿತಿಯನ್ನು ರಚಿಸಿವೆ; ಶಾಲಾಭಿವೃದ್ಧಿ ಸಮಿತಿ ರಚನೆಯಲ್ಲಿ ರಾಜ್ಯದಲ್ಲಿ ಸಾಧಿಸಿರುವ ಪ್ರಗತಿ ಎಷ್ಟು; (ಜಿಲ್ಲಾವಾರು ವಿವರ ನೀಡುವುದು).</td>
<td>
ಸರ್ಕಾರದ ಆದೇಶಗಳನ್ನು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಪಾಲಿಸುತ್ತಿವೆ:-<br><br>
ಮುಂದುವರೆದು, ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಾಲಾಭಿವೃದ್ಧಿ ಸಮಿತಿಯನ್ನು ರಚಿಸಿರುವ ವಿವರಗಳು ಈ ಕೆಳಕಂಡಂತಿವೆ:-
<table>
<tr><th>ಕ್ರ.ಸಂ.</th><th>ವಿವರ</th><th>ಒಟ್ಟು ಶಾಲೆ ಸಂಖ್ಯೆ</th><th>ಎಸ್.ಡಿ.ಎಂ.ಸಿ ರಚನೆ ಮಾಡಿದ ಶಾಲೆಗಳ ಸಂಖ್ಯೆ</th></tr>
<tr><td>1.</td><td>ಪ್ರಾಥಮಿಕ</td><td>41,905</td><td>40,501</td></tr>
<tr><td>2.</td><td>ಪ್ರೌಢ</td><td>4,850</td><td>4696</td></tr>
</table>
ಸ್ಥಳೀಯ ಸಮಸ್ಯೆಗಳು ಹಾಗೂ ನ್ಯಾಯಾಲಯದ ಪ್ರಕರಣಗಳಿಂದ ಕೆಲವು ಶಾಲೆಗಳಲ್ಲಿ ಎಸ್‌ಡಿಎಂಸಿ ರಚನಾಕಾರ್ಯ ವಿಳಂಬವಾಗಿರುತ್ತದೆ.<br><br>
ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-01ರಲ್ಲಿರಿಸಿದೆ.
</td>
</tr>
<tr>
<td>ಈ)</td>
<td>ಸಮುದಾಯದ ಪಾಲ್ಗೊಳ್ಳುವಿಕೆಗಾಗಿ ಶಾಲೆಗಳಲ್ಲಿ ಶಾಲಾ ನಿರ್ವಹಣಾ ಸಮಿತಿ ರಚಿಸಲು ಸೂಚಿಸಲಾಗಿದ್ದು, ಎಲ್ಲಾ ಶಾಲೆಗಳಲ್ಲಿ ಶಾಲಾಭಿವೃದ್ಧಿ ಸಮಿತಿಯನ್ನು ಯಾವ ಕಾಲಮಿತಿಯಲ್ಲಿ ರಚಿಸಲಾಗುವುದು ಮತ್ತು ಕೈಗೊಂಡಿರುವ ಕ್ರಮಗಳೇನು?</td>
<td>ಸಮುದಾಯದ ಪಾಲ್ಗೊಳ್ಳುವಿಕೆಗಾಗಿ ಶಾಲೆಗಳಲ್ಲಿ ಶಾಲಾ ನಿರ್ವಹಣಾ ಸಮಿತಿ ರಚಿಸಲು ಸೂಚಿಸಲಾಗಿದ್ದು, ಎಲ್ಲಾ ಶಾಲೆಗಳಲ್ಲಿ ಶಾಲಾಭಿವೃದ್ಧಿ ಸಮಿತಿಯನ್ನು ಎಸ್‌ಡಿಎಂಸಿ ರಚನೆಯಾದ ದಿನದಿಂದ ಮೂರು ವರ್ಷಗಳ ಕಾಲಮಿತಿಯಲ್ಲಿ ಅಸ್ತಿತ್ವದಲ್ಲಿರುವಂತೆ ರಚಿಸಲಾಗಿದೆ.</td>
</tr>
</table>

**ಇಪಿ 54 ಪಿಎಂಎ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಅನುಬಂಧ-1

## ಎಸ್.ಡಿ.ಎಂ.ಸಿ ರಚನೆ ಮಾಡಿರುವ ಶಾಲೆಗಳ ಅಂಕಿ -ಅಂಶ

ಅನುಬಂಧ - 01

| District Name | ಪ್ರಾಥಮಿಕ ಶಾಲೆಗಳ ಸಂಖ್ಯೆ | ಎಸ.ಡಿ.ಎಂ.ಸಿ ರಚನೆ ಮಾಡಿರುವ ಶಾಲೆಗಳ ಸಂಖ್ಯೆ | ಪ್ರೌಢ ಶಾಲೆಗಳ ಸಂಖ್ಯೆ | ಎಸ.ಡಿ.ಎಂ.ಸಿ ರಚನೆ ಮಾಡಿರುವ ಶಾಲೆಗಳ ಸಂಖ್ಯೆ |
|---|---|---|---|---|
| BAGALKOT | 1239 | 1160 | 190 | 177 |
| BALLARI | 594 | 574 | 125 | 125 |
| BELAGAVI | 1351 | 1351 | 137 | 137 |
| BELAGAVI CHIKKODI | 1726 | 1726 | 193 | 193 |
| BENGALURU RURAL | 1051 | 993 | 64 | 64 |
| BENGALURU U NORTH | 476 | 477 | 59 | 58 |
| BENGALURU U SOUTH | 843 | 822 | 90 | 88 |
| BIDAR | 1209 | 977 | 167 | 154 |
| CHAMARAJANAGARA | 724 | 701 | 86 | 85 |
| CHIKKABALLAPURA | 1407 | 1406 | 111 | 111 |
| CHIKKAMANGALURU | 1280 | 1280 | 116 | 116 |
| CHITRADURGA | 1624 | 1586 | 115 | 115 |
| DAKSHINA KANNADA | 893 | 893 | 170 | 170 |
| DAVANAGERE | 1066 | 1051 | 135 | 134 |
| DHARWAD | 735 | 729 | 112 | 104 |
| GADAG | 581 | 580 | 115 | 114 |
| HASSAN | 2136 | 2127 | 241 | 241 |
| HAVERI | 1128 | 1091 | 154 | 145 |
| KALBURGI | 1699 | 1371 | 298 | 265 |
| KODAGU | 368 | 361 | 47 | 47 |
| KOLAR | 1763 | 1760 | 124 | 124 |
| KOPPAL | 906 | 794 | 172 | 148 |
| MANDYA | 1541 | 1540 | 215 | 215 |
| MYSURU | 1829 | 1827 | 232 | 232 |
| RAICHUR | 1374 | 1351 | 229 | 225 |
| RAMANAGARA | 1168 | 1168 | 107 | 107 |
| SHIVAMOGGA | 1806 | 1803 | 164 | 164 |
| TUMAKURU | 1962 | 1962 | 132 | 132 |
| TUMAKURU MADHUGIRI | 1225 | 1216 | 95 | 95 |
| UDUPI | 570 | 568 | 105 | 105 |
| UTTARA KANNADA | 920 | 920 | 49 | 49 |
| UTTARA KANNADA SIRSI | 1096 | 1021 | 75 | 73 |
| VIJAYANAGARA | 928 | 857 | 122 | 116 |
| VIJAYAPURA | 1795 | 1721 | 160 | 146 |
| YADAGIRI | 892 | 737 | 144 | 122 |
| Total | **41905** | 40501 | **4850** | 4696 |

-04-

I[st] Order Copy (59)

Date :- 28-04-2001

ಅನುಬಂಧ - 2

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ
ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ.) -
ಗಳನ್ನು ರಚಿಸುವ ಬಗ್ಗೆ.

ಓದಲಾಗಿದೆ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಪ್ರಸ್ತಾವನೆ ಸಂಖ್ಯೆ:ನಿ(ಅ.ಸಂ.)
ಆ.ಶಾ/ಕ.ಶಿ.ಕಾ.ತಿ-೧/೨೦೦೦-೦೧, ದಿನಾಂಕ [illegible]

೦೦೦೦

**ಪ್ರಸ್ತಾವನೆ:-**

ಮೇಲೆ ಓದಲಾದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಪ್ರಸ್ತಾವನೆಯಲ್ಲಿ ಡಾ. ರಾಜಾ ರಾಮಣ್ಣರವರ ಅಧ್ಯಕ್ಷತೆಯ ಕಾರ್ಯತಂಡದ ಮಧ್ಯಂತರ ವರದಿಯ ಶಿಫಾರಸ್ಸಿನಂತೆ ಕರ್ನಾಟಕ ರಾಜ್ಯದ ಶಾಲಾ ಶಿಕ್ಷಣದಲ್ಲಿ ಗುಣಾತ್ಮಕ ಬದಲಾವಣೆ ತರಲು ಹಾಗೂ ಶಾಲಾ ಆಡಳಿತದಲ್ಲಿ ಸಮುದಾಯದ ಸಕ್ರಿಯ ಪಾತ್ರವನ್ನು ಖಚಿತ ಪಡಿಸಲು ಹಾಗೂ ತತ್ಸಂಬಂಧಿಯಾದ ವಿಷಯಗಳನ್ನು ಕುರಿತು ಶಿಕ್ಷಣ ಕಾಯ್ದೆಗೆ ತಿದ್ದುಪಡಿಯನ್ನು ಸೂಚಿಸಲಾಗಿದೆ.

**ಈ ಕೆಳಗಿನ ಕಾರಣಗಳಿಗಾಗಿ ಈ ತಿದ್ದುಪಡಿಯು ಅವಶ್ಯಕವಾಗಿದೆ**

೧) ರಾಷ್ಟ್ರೀಯ ಶಿಕ್ಷಣ ನೀತಿಯನ್ವಯ ಪ್ರಾಥಮಿಕ ಶಿಕ್ಷಣದ ಸಾರ್ವತ್ರೀಕರಣವನ್ನು ಸಾಧಿಸಲು-

೨) ಶಾಲೆಗಳು ಪರಿಣಾಮಕಾರಿಯಾಗಿ ಕೆಲಸ ಮಾಡುವುದನ್ನು ಖಚಿತಪಡಿಸಿಕೊಳ್ಳಲು-

೩) ತಮ್ಮ ಮಕ್ಕಳ ಏಳಿಗೆಯ ಬಗ್ಗೆ ಸದಾ ಕಾಳಜಿಯುಳ್ಳ ಪೋಷಕರು/ಪಾಲಕರು ಶಿಕ್ಷಣ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮಾಡಲು-

೪) ಶಿಕ್ಷಣ ವ್ಯವಸ್ಥೆಯನ್ನು ವಿಕೇಂದ್ರೀಕರಿಸಿ ಶಾಲಾ ಆಡಳಿತವನ್ನು ಸುಧಾರಿಸಲು-

೫) ಶಿಕ್ಷಕರನ್ನು ಪ್ರೇರೇಪಿಸಿ ಅವರ ಜವಾಬ್ದಾರಿಯನ್ನು ಹೆಚ್ಚಿಸಲು-

೬) ಗ್ರಾಮ ಶಿಕ್ಷಣ ಸಮಿತಿಗಳ ರಚನೆಯಲ್ಲಿ ಉಳಿದುಕೊಂಡ ನ್ಯೂನತೆಗಳನ್ನು ಹೋಗಲಾಡಿಸಲು-

೭) ಶಾಲಾ ಯೋಜನೆ ಹಾಗೂ ಅಭಿವೃದ್ಧಿಗಾಗಿ ಶಾಲೆಯನ್ನೇ ಒಂದು ಘಟಕವನ್ನಾಗಿ ಪರಿಗಣಿಸಿ, ಪ್ರಕಲ್ಪನಾತ್ಮಕ ದಾಖಲೆ (ವಿಜನ್ ಡಾಕ್ಯುಮೆಂಟ್) ತಯಾರಿಸಲು-

೮) ದಾಖಲಾತಿ / ಹಾಜರಾತಿ ಶಿಕ್ಷಣ ಗುಣಮಟ್ಟ ಸುಧಾರಣೆ ಕುರಿತಂತೆ ಇರುವ ಸಮಸ್ಯೆಗಳನ್ನು ಪರಿಹರಿಸಲು-

೯) ತರಗತಿಯ ಚಟುವಟಿಕೆಗಳನ್ನು ಶಿಸ್ತು ಬದ್ಧವಾಗಿ ಸಂಘಟಿಸಲು-

೧೦) ಸಂಪನ್ಮೂಲಗಳನ್ನು ಕ್ರೋಢೀಕರಿಸಲು -

ಶಿಕ್ಷಣ ಪ್ರಕ್ರಿಯೆಯಲ್ಲಿ ಸಮುದಾಯದ ಪಾಲ್ಗೊಳ್ಳುವಿಕೆ ಅನಿವಾರ್ಯವಾಗಿದೆ. ಈ ನಿಟ್ಟಿನಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ ಶಾಲಾ ಅಭಿವೃದ್ಧಿ ಸಮಿತಿ ಮತ್ತು ಗ್ರಾಮ ಶಿಕ್ಷಣ ಸಮಿತಿಗಳನ್ನು ರದ್ದುಪಡಿಸಿ, ಶಾಲಾ ಮಟ್ಟದಲ್ಲಿ ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ, ಗ್ರಾಮ ಪಂಚಾಯತ್ ಮಟ್ಟದಲ್ಲಿ

ಗ್ರಾಮ ಪಂಚಾಯತ್ ಶಿಕ್ಷಣ ಸಮಿತಿ, ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಪಂಚಾಯತಿ ಸಮಿತಿ ಹಾಗೂ ನಗರ ಮಟ್ಟದಲ್ಲಿ ನಗರ ಸಭೆ/ ಕಾರ್ಪೊರೇಷನ್ ಸಮಿತಿಗಳ ರಚನೆಯನ್ನು ಉದ್ದೇಶಿಸಲಾ. ಕರ್ನಾಟಕ ಶಿಕ್ಷಣ ಕಾಯ್ದೆ ೧೯೮೩ ಕ್ಕೆ ತಿದ್ದುಪಡಿ ತರುವ ಪ್ರಕ್ರಿಯೆಯು ಪೂರ್ಣಗೊಳ್ಳಲು ಸಾಕ ಕಾಲಾವಕಾಶದ ಅವಶ್ಯಕತೆ ಇರುವುದರಿಂದ ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ (ಎಸ್. ಡಿ. ಎಂ. ಸಿ.) ಗಳ ರಚನೆಗೆ ಕಾನೂನು ತಿದ್ದುಪಡಿಗೆ ಪ್ರಕ್ರಿಯೆ ಪ್ರಾರಂಭಿಸುವುದರೊಂದಿಗೆ ಸರ್ಕಾರದ ಕಾರ್ಯಕಾರಿ ಆದೇಶವನ್ನು ಹೊರಡಿಸುವಂತೆ ಪ್ರಸ್ತಾವನೆಯಲ್ಲಿ ಕೋರಲಾಗಿದೆ. ಕರ್ನಾಟಕ ಶಿಕ್ಷಣ ಕಾಯ್ದೆ ೧೯೮೩ ಕ್ಕೆ ತಿದ್ದುಪಡಿ ತರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಪ್ರಕ್ರಿಯೆ ಪೂರ್ಣಗೊಳ್ಳಲು ಸಾಕಷ್ಟು ಕಾಲಾವಕಾಶದ ಅವಶ್ಯಕತೆ ಇರುವುದನ್ನು ಸರ್ಕಾರವು ಮನಗಂಡು ಶಾಲಾ ಅಬಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿಗಳ ರಚನೆ ಬರಿತಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:-ಇಡಿ ೧ ಪಿ ಬಿ ಎಸ್ ೨೦೦೧, ಬೆಂಗಳೂರು, ದಿನಾಂಕ:೨೮:೪.೨೦೦೧.**

ಕರ್ನಾಟಕ ರಾಜ್ಯದಲ್ಲಿ ಶಾಲಾ ಶಿಕ್ಷಣದಲ್ಲಿ ಗುಣಾತ್ಮಕ ಬದಲಾವಣೆ ತರಲು ಹಾಗೂ ಶಾಲಾ ಆಡಳಿತದಲ್ಲಿ ಸಮುದಾಯದ ಸಕ್ರಿಯ ಪಾತ್ರವನ್ನು ಖಚಿತಪಡಿಸಲು ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ(ಕಿರಿಯ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳು) ಹಾಗೂ ಪ್ರೌಢಶಾಲೆಗಳಲ್ಲಿ ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ.) ಗಳ ರಚನೆಗೆ ಸರ್ಕಾರದ ಅನುಮತಿಯನ್ನು ನೀಡಲಾಗಿದೆ.

**ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ ( ಎಸ್. ಡಿ .ಎಂ. ಸಿ.) ಯ ರಚನೆ**

೧) ಎಸ್.ಡಿ.ಎಂ.ಸಿ. ಯು ಈ ಕೆಳಕಂಡ ಸದಸ್ಯರನ್ನೊಳಗೊಂಡಿರುತ್ತದೆ.

(ಅ) ಪೋಷಕ ಸಭೆಯಿಂದ ೯ ಜನ ಪೋಷಕ ಪ್ರತಿನಿಧಿಗಳನ್ನು ಆಯ್ದುಕೊಳ್ಳಬೇಕು. ಈ ಒಂಭತ್ತು ಜನರಲ್ಲಿ ಕನಿಷ್ಠ ಮೂವರು ಮಹಿಳಾ ಪ್ರತಿನಿಧಿಗಳು ಇರಬೇಕು. ಕನಿಷ್ಠ ಇಬ್ಬರು ಪರಿಶಿಷ್ಟ ಜಾತಿ / ಪಂಗಡಗಳಿಗೆ ಸೇರಿದವರಾಗಿರಬೇಕು. ಒಬ್ಬರು ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದವರಾಗಿರಬೇಕು. ಯಾವುದೇ ಪೋಷಕರು ಏಕಕಾಲಕ್ಕೆ ಒಂದಕ್ಕಿಂತ ಹೆಚ್ಚು ಎಸ್.ಡಿ.ಎಂ.ಸಿ. ಗಳ ಸದಸ್ಯರಾಗಿರಕೂಡದು. ಒಂದು ವೇಳೆ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ / ಅಲ್ಪಸಂಖ್ಯಾತ ಪ್ರತಿನಿಧಿಗಳು ಲಭ್ಯವಿಲ್ಲದಿದ್ದಲ್ಲಿ ಇತರರಿಂದ ಭರ್ತಿ ಮಾಡುವುದು. ೩ ವರ್ಷದ ಒಳಗೆ ಮುಂದೆ ಈ ವರ್ಗದ ಮಕ್ಕಳು ದಾಖಲಾದಲ್ಲಿ ಅಂತಹ ಪೋಷಕರನ್ನು ಗಮನಿಸಿ ಮುಂದೆ ಉದ್ಭವಿಸುವ ಸ್ಥಾನಗಳಿಗೆ ಆದ್ಯತೆಯ ಮೇರೆಗೆ ಭರ್ತಿ ಮಾಡುವುದು.

(ಆ) ಈ ಕೆಳಗಿನವರು ಪದನಿಮಿತ್ತ ಸದಸ್ಯರಾಗಿರಬೇಕು.

(೧) ಆ ಕ್ಷೇತ್ರವನ್ನು ಪ್ರತಿನಿಧಿಸುವ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಸದಸ್ಯರು

(೨) ಅಂಗನವಾಡಿ ಇದ್ದಲ್ಲಿ ಅದರ ಶಿಕ್ಷಕಿಯೊಬ್ಬರು

(೩) ಆ ಕ್ಷೇತ್ರಕ್ಕೆ ಸಂಬಂಧಿಸಿದ ಪ್ರಾಥಮಿಕ ಆರೋಗ್ಯ ಕಾರ್ಯಕರ್ತರು.

(೪) ಆ ಶಾಲೆಯ ಮುಖ್ಯ ಗುರುಗಳು.

3

(೯) ಈ ಕೆಳಗಿನವರು ಎಸ್.ಡಿ.ಎಂ.ಸಿ. ಗೆ ನಾಮನಿರ್ದೇಶಿತ ಸದಸ್ಯರಾಗಿರಬೇಕು

೧) ಶಾಲೆಯನ್ನು ದತ್ತು ತೆಗೆದುಕೊಂಡ ಮಹನೀಯರು.

೨) ಶಾಲೆ ಕಟ್ಟಲು ಭೂಮಿ ದಾನ ಮಾಡಿದ ದಾನಿಗಳು, ಶಾಲಾ ಕಟ್ಟಡವನ್ನು ಕಟ್ಟಿಸಿಕೊಟ್ಟ ಮಹನೀಯರು ಮತ್ತು ರೂಪಾಯಿ ೧೦,೦೦೦-೦೦ ಅಥವಾ ಅದಕ್ಕಿಂತ ಹೆಚ್ಚಿನ ಮೌಲ್ಯದ ಶೈಕ್ಷಣಿಕ ಉಪಕರಣಗಳನ್ನು ಕೊಡಿಸಿದ ಮಹನೀಯರು ಅಥವಾ ರೂಪಾಯಿ ೧೦,೦೦೦-೦೦ ಅಥವಾ ಅದಕ್ಕಿಂತ ಹೆಚ್ಚಿನ ಮೊತ್ತವನ್ನು ದಾನ ಮಾಡಿದ ದಾನಿಗಳು.

೩) ಆ ಕ್ಷೇತ್ರದಲ್ಲಿ ವಾಸಿಸುವ ಒಬ್ಬ ಶಿಕ್ಷಣ ತಜ್ಞರು ಅಥವಾ ಒಬ್ಬ ನಿವೃತ್ತ ಶಿಕ್ಷಕರು.

೪) ಸ್ಥಳೀಯ ಸ್ವಯಂ ಸೇವಾ ಸಂಸ್ಥೆಗಳ ಇಬ್ಬರು ಸದಸ್ಯರು.

೫) ಯುವಕ ಸಂಘ ಅಥವಾ ಯುವತಿ ಸಂಘದ ಒಬ್ಬ ಪದಾಧಿಕಾರಿಗಳು.

೬) ಏಳನೇ ವರ್ಗದ ಅಥವಾ ಹತ್ತನೇ ವರ್ಗದ ಒಬ್ಬ ವಿದ್ಯಾರ್ಥಿ / ವಿದ್ಯಾರ್ಥಿನಿ.

ನಾಮ ನಿರ್ದೇಶನಗೊಂಡ ಸದಸ್ಯರಿಗೆ ಮತದಾನದ ಹಕ್ಕು ಇರುವುದಿಲ್ಲ.

**೨) ಎಸ್. ಡಿ. ಎಂ. ಸಿ .ಯ ಕಾಲಾವಧಿ**

ಎಸ್. ಡಿ. ಎಂ. ಸಿ.ಯ ಕಾಲಾವಧಿಯು ಮೂರು ವರ್ಷಗಳದ್ದಾಗಿರುತ್ತದೆ.

**೩) ಸ್ಥಾಯಿ ಸಮಿತಿಗಳ ರಚನೆ**

ಎಸ್. ಡಿ. ಎಂ. ಸಿ. ಯು ಬೇರೆ ಬೇರೆ ವಿಷಯ ಸಮಿತಿಗಳನ್ನು ಸ್ಥಾಯಿ ಸಮಿತಿಗಳಾಗಿ ರಚಿಸಿಕೊಳ್ಳಬಹುದು. ಅವಶ್ಯಕತೆಗನುಗುಣವಾಗಿ ಅದು ಪ್ರತಿಯೊಂದು ಸ್ಥಾಯಿ ಸಮಿತಿಗೂ ಗೌರವ ಸದಸ್ಯರನ್ನು ನಾಮನಿರ್ದೇಶನ ಮಾಡಬಹುದು. ಎಸ್. ಡಿ. ಎಂ. ಸಿ. ಯು ಈ ಕೆಳಕಂಡಂತೆ ಸ್ಥಾಯಿ ಸಮಿತಿಗಳನ್ನು ರಚಿಸಿಕೊಳ್ಳಬಹುದು.

ಅ) ಅಭಿವೃದ್ಧಿ ಸಮಿತಿ.

ಆ) ಮೇಲುಸ್ತುವಾರಿ ಸಮಿತಿ.

ಇ) ಎಸ್. ಡಿ. ಎಂ. ಸಿ. ಯು ರಚಿಸಬಯಸುವ ಬೇರೆ ಯಾವುದೇ ಸಮಿತಿ.

**೪). ಎಸ್.ಡಿ.ಎಂ. ಸಿ. ಯ ಅಧಿಕಾರಗಳು**

೧) ಶಾಲೆಯು ಸರಿಯಾಗಿ ಕೆಲಸ ಮಾಡುವುದನ್ನು ಖಾತರಿಪಡಿಸಿಕೊಳ್ಳುವುದು. ಶಿಕ್ಷಕ ಸಿಬ್ಬಂದಿಯ ಸಕಾಲಿಕ ಹಾಗೂ ನಿಯಮಿತ ಹಾಜರಾತಿಯ ಮೇಲೆ ಗಮನವಿಡುವುದು. ಸದಸ್ಯರು ಶಿಕ್ಷಕರ ಹಾಜರಾತಿ ವಹಿಯನ್ನು ಶಾಲೆಯಲ್ಲಿಯೇ ಪರಿವೀಕ್ಷಿಸಬಹುದು.

೨) ಶಿಕ್ಷಕ ಸಿಬ್ಬಂದಿಯ ಸಕಾಲಿಕ ಹಾಗೂ ನಿಯಮಿತ ಹಾಜರಾತಿಯಲ್ಲಿ ಏನಾದರೂ ದೋಷ ಕಂಡುಬಂದರೆ, ಆ ಬಗ್ಗೆ ಮಾಸಿಕ ಸಭೆಯಲ್ಲಿ ಚರ್ಚಿಸಿ, ಗೊತ್ತುವಳಿ ಪಾಸು ಮಾಡಿ ಸೂಕ್ತ ಕ್ರಮಕ್ಕೆ ಮೇಲಧಿಕಾರಿಗಳಿಗೆ ವರದಿ ಸಲ್ಲಿಸುವುದು. ಮೇಲಧಿಕಾರಿಗಳು ಈ ಬಗ್ಗೆ ತೆಗೆದುಕೊಂಡ ಕ್ರಮದ ಕುರಿತು ಗೊತ್ತುವಳಿ ಸ್ವೀಕರಿಸಿದ ೩೦ ದಿನಗಳೊಳಗೆ ಎಸ್. ಡಿ. ಎಂ. ಸಿ. ಗೆ ತಿಳಿಸಬೇಕು.

೩) ಕಿರಿಯ ಮತ್ತು ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಮುಖ್ಯ ಶಿಕ್ಷಕರುಗಳಿಗೆ ಸಾಂದರ್ಭಿಕ ಹಾಗೂ ನಿರ್ಬಂಧಿತ ರಜೆ ಮಂಜೂರು ಮಾಡುವ ಅಧಿಕಾರವು ಎಸ್. ಡಿ. ಎಂ. ಸಿ. ಯ ಅಧ್ಯಕ್ಷರಿಗೆ ಇರುತ್ತದೆ.

೪) ಒಂದು ವರ್ಷದಲ್ಲಿ ನಾಲ್ಕಕ್ಕೆ ಮೀರದಂತೆ ಸ್ಥಳೀಯ ರಜೆಗಳನ್ನು ನಿರ್ಧರಿಸುವುದು.

೫) ನಿರುಪಯುಕ್ತವಾದ ವಿಜ್ಞಾನೋಪಕರಣಗಳು, ಕಲಿಕೆಯ ಸಾಧನಗಳು, ಪೀಠೋಪಕರಣಗಳು, ಆಟದ ಸಾಮಗ್ರಿಗಳು, ನಕಾಷೆಗಳು, ಚಾರ್ಟ್‌ಗಳು, ವಾಚನಾಲಯದ ಪುಸ್ತಕಗಳು ಇತ್ಯಾದಿ ಎಲ್ಲಾ ಸಾಮಗ್ರಿಗಳು ಸೇರಿ ಗರಿಷ್ಠ ಕಿರಿಯ ಪ್ರಾಥಮಿಕ ಶಾಲೆಗಳಿಗೆ ವಾರ್ಷಿಕ ರೂ.೨೦೦೦.೦೦, ಹಿರಿಯ ಪ್ರಾಥಮಿಕ ಶಾಲೆಗಳಿಗೆ ವಾರ್ಷಿಕ ರೂ.೫೦೦೦.೦೦ ಮತ್ತು ಪ್ರೌಢ ಶಾಲೆಗಳಿಗೆ ವಾರ್ಷಿಕ ರೂ.೧೦೦೦೦.೦೦ ದ ಮಿತಿಯಲ್ಲಿ ನಿರುಪಯುಕ್ತವೆಂದು ಘೋಷಿಸುವುದು. ಹೀಗೆ ಘೋಷಿಸಿದ ಪೀಠೋಪಕರಣಗಳನ್ನು ಹರಾಜು ಮಾಡಿ ಬಂದ ಹಣವನ್ನು ಶಾಲೆಯ ಶಿಕ್ಷಣ ನಿಧಿಗೆ ಜಮಾ ಮಾಡುವುದು.

೬) ಸಾಂಸ್ಕೃತಿಕ ಚಟುವಟಿಕೆಗಳು, ಆಟೋಟ ಸ್ಪರ್ಧೆಗಳು, ರಾಜ್ಯದೊಳಗಿನ ಶೈಕ್ಷಣಿಕ ಪ್ರವಾಸಗಳು, ಬೇರೆ ರೀತಿಯ ಸಂದರ್ಶನಗಳು ಇತ್ಯಾದಿಗಳನ್ನು ಸಂಘಟಿಸಲು ಅನುಮತಿ ನೀಡುವುದು.

೭) ಶಾಲೆಯು ದಾನವಾಗಿ ಸ್ವೀಕರಿಸಿದ ಹಾಗೂ ಖರ್ಚು ಮಾಡಿದ ಹಣದ ಲೆಕ್ಕಪತ್ರಗಳನ್ನು ಹಾಗೂ ತತ್ಸಂಬಂಧಿಯಾದ ದಾಖಲೆಗಳನ್ನು ಪರೀಕ್ಷಿಸುವುದು.

೮) ಶಾಲೆಯ ಜಮೀನಿನಲ್ಲಿ ಬೆಳೆದ ಬೆಳೆಗಳನ್ನು ನಿಯಮಿತವಾಗಿ ಹರಾಜು ಮಾಡಿ ಬಂದ ಹಣವನ್ನು ಶಾಲೆಯ ಶಿಕ್ಷಣ ನಿಧಿಗೆ ಜಮಾ ಮಾಡುವುದು.

೯) ವಾಚನಾಲಯ ನಿಧಿ, ಕ್ರೀಡಾ ನಿಧಿ, ಪ್ರಯೋಗಾಲಯ ನಿಧಿ ಇತ್ಯಾದಿ ಸರ್ಕಾರೇತರ ನಿಧಿಗಳ ಅನುಮೋದನೆಯನ್ನು ನಿಯಮಾನುಸಾರ ನೀಡುವುದು.

೧೦) ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ರಾಜ್ಯ ವಲಯ ಮತ್ತು ಕೇಂದ್ರ ವಲಯದಿಂದ ಬಿಡುಗಡೆಯಾಗುವ ಹಣದಲ್ಲಿ ಆ ಶಾಲೆಗೆ ಬೇಕಾಗುವ ಸಾದನ ಸಾಮಗ್ರಿಗಳನ್ನು ಕೊಂಡುಕೊಳ್ಳುವ ಅಧಿಕಾರ ಹೊಂದಿರುತ್ತದೆ.

**ಜ) ಎಸ್. ಡಿ. ಎಂ. ಸಿ. ಯ ಕರ್ತವ್ಯಗಳು**

೧) ಶಾಲೆಯ ವ್ಯಾಪ್ತಿಯಲ್ಲಿನ ಶಾಲೆಯಿಂದ ಹೊರಗುಳಿದ ಎಲ್ಲಾ ಮಕ್ಕಳನ್ನು ಶಾಲೆಗೆ ದಾಖಲು ಮಾಡುವಂತೆ ಪೋಷಕರಲ್ಲಿ ಅರಿವು ಮೂಡಿಸುವುದು. ಹಾಗೂ ಆ ರೀತಿ ದಾಖಲಾದ ಮಕ್ಕಳನ್ನು ನಿಯಮಿತವಾಗಿ ಶಾಲೆಗೆ ಕಳುಹಿಸುವಂತೆ ಮಾಡುವುದು.

೨) ಶಾಲೆಯ ವ್ಯಾಪ್ತಿಯಲ್ಲಿರುವ,ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಬರುವಂತೆ ಮಾಡಲು ದಾಖಲಾತಿ ಆಂದೋಲನ, ಬ್ರಿಜ್ ಕೋರ್ಸ್, ಚಿಣ್ಣರ ಅಂಗಳ ಇತ್ಯಾದಿ ಕಾರ್ಯಕ್ರಮಗಳನ್ನು ಆಯೋಜಿಸುವುದು. ಶಾಲೆಯಿಂದ ಹೊರಗುಳಿದ ಮಕ್ಕಳ ಯಾದಿಯನ್ನು ತಯಾರಿಸಿ ಸಾರ್ವಜನಿಕ ಸ್ಥಳಗಳಾದ ಶಾಲೆ, ಚಾವಡಿ, ಗ್ರಾಮ ಪಂಚಾಯಿತಿ ಸಮುದಾಯ ಭವನ ಇತ್ಯಾದಿಗಳಲ್ಲಿ ಪ್ರಸಿದ್ಧಪಡಿಸುವುದು.

೩) ಶಾಲೆಯಲ್ಲಿ ಓದುವ ಎಲ್ಲಾ ಮಕ್ಕಳು ನಿರ್ದಿಷ್ಟ ಗುಣಮಟ್ಟದ ಕಲಿಕೆ ಪಡೆಯಲು ಬೇಕಾದ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವುದು.

೪) ಶಾಲೆಯ ಆವರಣವನ್ನು ಹಾಗೂ ಕಟ್ಟಡವನ್ನು ಅತಿಕ್ರಮಣ ಹಾಗೂ ವಿನಾಶಗಳಿಂದ ಕಾಪಾಡುವುದು.

೫) ವೇಳಾಪಟ್ಟಿಯಂತೆ ಪ್ರತಿ ವರ್ಷ ೨೨೦ ಕಲಿಕಾ ದಿನಗಳು ಮತ್ತು ಪ್ರತಿ ದಿನ ಐದೂವರೆ ಗಂಟೆಗಳು ಶಾಲೆ ನಡೆಯುವುದನ್ನು ಖಾತರಿ ಪಡಿಸಿಕೊಳ್ಳುವುದು.

೬) ವರ್ಷದಲ್ಲಿ ಮೂರು ಸಲ ಅಂದರೆ ಜುಲೈ, ನವೆಂಬರ್ ಹಾಗೂ ಫೆಬ್ರುವರಿ ಈ ತಿಂಗಳುಗಳಲ್ಲಿ ಪೋಷಕರ ಸಭೆಗಳನ್ನು ಆಯೋಜಿಸುವುದು.

೭.) ಶಾಲಾ ಶಿಕ್ಷಣ ನಿಧಿ ಸ್ಥಾಪಿಸುವುದು,
ಶಾಲಾ ಅಭಿವೃದ್ಧಿಗಾಗಿ ಎಸ್. ಡಿ. ಎಂ. ಸಿ. ಯು ಸಾರ್ವಜನಿಕರಿಂದ ವಂತಿಗೆಗಳನ್ನು / ದಾನವನ್ನು ಸ್ವೀಕರಿಸಬಹುದು. ಸಮಿತಿಯ ಹೆಸರಿನಲ್ಲಿ ಬ್ಯಾಂಕಿನಲ್ಲಿ ಒಂದು ಖಾತೆ ತೆರೆದು ಛೇರ್‌ಮನ್ ಹಾಗೂ ಕಾರ್ಯದರ್ಶಿಗಳು ಜಂಟಿಯಾಗಿ ಆ ಖಾತೆಯನ್ನು ನಿರ್ವಹಿಸುವುದು. ಈ ಕೆಳಕಾಣಿಸಿದ ಎಲ್ಲಾ ಹಣವನ್ನು ಈ ಖಾತೆಗೆ ಜಮಾ ಮಾಡುವುದು.

ಅ) ಶಾಲೆಯ ಸೌಲಭ್ಯಗಳಿಗಾಗಿ ಸರ್ಕಾರದಿಂದ ಅಥವಾ ಸಂಘ ಸಂಸ್ಥೆಗಳಿಂದ ಕೊಡಲ್ಪಟ್ಟ ಹಣ.

ಆ) ಶಾಲೆಗೆ ಕೊಡಲ್ಪಟ್ಟ ಸಾದಿಲ್ವಾರು ಹಣ.

ಈ) ಶಾಲಾಭಿವೃದ್ಧಿಗಾಗಿ ದಾನಿಗಳು ಕೊಟ್ಟ ಹಣ.

೮) ಗ್ರಾಮ ಪಂಚಾಯತ್ ಅಥವಾ ತಾಲ್ಲೂಕು ಪಂಚಾಯತಿಯ ಇಂಜಿನಿಯರಿಂಗ್ ಸಿಬ್ಬಂದಿಯ ತಾಂತ್ರಿಕ ಸಹಾಯ ಸಲಹೆಗಳೊಂದಿಗೆ ಶಾಲೆಯ ಕಟ್ಟಡ ನಿರ್ಮಾಣ, ಹೆಚ್ಚುವರಿ ಕೋಣೆಗಳ ನಿರ್ಮಾಣ, ದುರಸ್ತಿ ಕಾರ್ಯಗಳನ್ನು ನೇರವಾಗಿ ಎಸ್. ಡಿ. ಎಂ. ಸಿ. ಯೇ ಮಾಡಬೇಕು.

೯) ದಾನಿಗಳನ್ನು ಗುರುತಿಸಿ ಅವರನ್ನು ಸಂಪರ್ಕಿಸಿ, ಶಾಲೆಯನ್ನು ದತ್ತು ತೆಗೆದುಕೊಳ್ಳಲು ಅವರನ್ನು ಪ್ರೇರೇಪಿಸಬೇಕು.

೧೦) ಶಾಲಾ ಸಂಕೀರ್ಣ ಕಾರ್ಯಕ್ರಮದಲ್ಲಿ ಶಿಕ್ಷಕರು ಸಕ್ರಿಯವಾಗಿ ಭಾಗವಹಿಸುವಂತೆ ಅವರನ್ನು ಪ್ರೇರೇಪಿಸುವುದು.

೧೧) ಶಾಲಾ ಮಕ್ಕಳಿಗಾಗಿ ಆರೋಗ್ಯ ಶಿಬಿರಗಳನ್ನು ಏರ್ಪಡಿಸುವುದು ಹಾಗೂ ಅವರಿಗೆ ಆರೋಗ್ಯ ಚೀಟಿಗಳನ್ನು ಕೊಡುವುದು.

೧೨) ಸರ್ಕಾರದಿಂದ ಕೊಡಲ್ಪಡುವ ಪ್ರೋತ್ಸಾಹದಾಯಕ ಸೌಲಭ್ಯಗಳನ್ನು ವಿದ್ಯಾರ್ಥಿಗಳಿಗೆ ತಲುಪುವಂತೆ ನೋಡಿಕೊಳ್ಳುವುದು.

**೬) ಎಸ್. ಡಿ. ಎಂ. ಸಿ. ಯ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು**

(ಅ) ಒಂಭತ್ತು ಜನ ಪೋಷಕ ಪ್ರತಿನಿಧಿಗಳಿಂದ ಒಬ್ಬರನ್ನು ಎಸ್. ಡಿ. ಎಂ.ಸಿ. ಯ ಅಧ್ಯಕ್ಷರೆಂದು ಬಹುಮತದಿಂದ ಆರಿಸುತ್ತದೆ .

(ಆ) ಆಯಾ ಎಸ್. ಡಿ. ಎಂ. ಸಿ. ಯ ಪದನಿಮಿತ್ತ ಸದಸ್ಯರಾದ ಆಯಾ ಶಾಲೆಯ ಮುಖ್ಯ ಗುರುಗಳು ಆಯಾ ಎಸ್.ಡಿ. ಎಂ. ಸಿ. ಯ ಸದಸ್ಯ ಕಾರ್ಯದರ್ಶಿ ಹಾಗೂ ಖಜಾಂಚಿಗಳಾಗಿರುತ್ತಾರೆ.

**೭) ಸಭೆ ನಡೆಸುವ ಕ್ರಮ**

ಸಭೆ ನಡೆಸಲು ಪೋಷಕ ಪ್ರತಿನಿಧಿಗಳಲ್ಲಿ ಮೂರನೇ ಎರಡು ಭಾಗದಷ್ಟು ಹಾಜರಾತಿ ಕಡ್ಡಾಯವಾಗಿರುತ್ತದೆ.

**೮) ಪೋಷಕ ಸಭೆಯ ರಚನೆ**

ಪ್ರತಿಯೊಂದು ಶಾಲೆಗೂ ಒಂದು ಪೋಷಕರ ಸಭೆ ಇರುತ್ತದೆ. ಮುಖ್ಯ ಗುರುಗಳ ಹತ್ತಿರ ನೋಂದಾಯಿತ ಪೋಷಕರ ಪಟ್ಟಿ ಇರುತ್ತದೆ. (ತಂದೆ ಮತ್ತು ತಾಯಿ ಇಬ್ಬರೂ, ತಂದೆ ತಾಯಿ ಇಲ್ಲದಿದ್ದಲ್ಲಿ ಪೋಷಕರು / ವಾರಸುದಾರರು) ಈ ಪಟ್ಟಿಯನ್ನು ಪರಿವೀಕ್ಷಣೆಗೆ ಇಡಬೇಕು ಹಾಗೂ ಪ್ರಕಟಿಸಬೇಕು.

ಪೋಷಕ ಸಭೆಯ ಕುರಿತಾದ ಸೂಚನೆಯನ್ನು ಶಾಲೆಯ ಫಲಕ ಗ್ರಾಮದ ಚಾವಡಿ ಹಾಗು ಸಾರ್ವಜನಿಕ ಸ್ಥಳಗಳಲ್ಲಿ ೧೫ ದಿನಗಳ ಮುಂಚಿತವಾಗಿ ಪ್ರಕಟಿಸತಕ್ಕದ್ದು. ಈ ಸೂಚನೆಯಲ್ಲಿ ಪೋಷಕ ಸಭೆಯು ನಡೆಯುವ ದಿನಾಂಕ ಹಾಗೂ ಸಮಯವನ್ನು ಪ್ರಕಟಿಸತಕ್ಕದ್ದು.

**ಪೋಷಕ ಸಭೆ ನಡೆಸಲು ಗೊತ್ತುಪಡಿಸಿದ ಅಧಿಕಾರಿ** ಆಯಾ ಮುಖ್ಯ ಶಿಕ್ಷಕರ ಸಮ್ಮುಖದಲ್ಲಿ ಪೋಷಕರ ಸಭೆಯ ರಚನೆ, ಗೊತ್ತುವಳಿ ಅಂಗೀಕಾರ, ಅಧ್ಯಕ್ಷರ ಅಧಿಕಾರ ಸ್ವೀಕಾರ ಹಾಗೂ ಪ್ರಥಮ ಸಭೆ ನಡೆಯುತ್ತದೆ.

**ಸಭೆ ನಡೆಯುವಿಕೆ**

ಪ್ರತಿಯೊಂದು ಶಾಲೆಗೂ ಒಂದು ಪೋಷಕರ ಸಭೆ ಇರುತ್ತದೆ. ಮುಖ್ಯ ಗುರುಗಳ ಹತ್ತಿರ ನೋಂದಾಯಿತ ಪೋಷಕರ ಪಟ್ಟಿ ಇರುತ್ತದೆ. ಪ್ರತಿ ವರ್ಷ ಜುಲೈ ತಿಂಗಳಲ್ಲಿ ಆಯಾ ಶಾಲೆಯ ಮುಖ್ಯ ಗುರುಗಳು ಇಂತಹ ನೋಂದಾಯಿತ ಪೋಷಕರ ಸಭೆ ಕೂಡಿಸುತ್ತಾರೆ. ಆ ಸಭೆಯು ಆ ವರ್ಷಕ್ಕೆ ಪೋಷಕ ಸಭೆಯು ರಚಿತವಾಯಿತೆಂಬ ಬಗ್ಗೆ ಗೊತ್ತುವಳಿಯನ್ನು ಅಂಗೀಕರಿಸುತ್ತದೆ. ಪೋಷಕ ಸಭಎಯ ನಂತರ ಇದೇ ಸಬೆಯಲ್ರಲಿ ೯ ಜನ ಪೋಷಕ ಪ್ರತಿನಿಧಿಗಳನ್ನು ಆಯ್ಕೆ ಮಾಡಲಾಗುತ್ತದೆ ಅಗತ್ಯವಿದ್ದಲ್ಲಿ ಕೈ ಎತ್ತುವ ಮೂಲಕ ಆಯ್ಕೆ ಮಾಡಲ್ಪಡುತ್ತದೆ.

**ಅಧ್ಯಕ್ಷರ ಆಯ್ಕೆ**

ಪೋಷಕರ ಸಭೆಯ ತಕ್ಷಣ ಈ ಒಂಭತ್ತು ಜನ ಪೋಷಕ ಪ್ರತಿನಿಧಿಗಳು ತಮ್ಮಲ್ಲಿ ಒಬ್ಬರನ್ನು ಅಧ್ಯಕ್ಷರೆಂದು ಆಯ್ಕೆ ಮಾಡುತ್ತಾರೆ. ಆಯಾ ಶಾಲೆಯ ಮುಖ್ಯ ಶಿಕ್ಷಕರು ಎಸ್ ಡಿ ಎಂ ಸಿ ಯ ಸದಸ್ಯ ಕಾರ್ಯದರ್ಶಿ ಗಳಾಗುತ್ತಾರೆ.

**ಎಸ್ ಡಿ ಎಂ ಸಿ ಯ ರಚನೆ**

ಅಧ್ಯಕ್ಷರ ಆಯ್ಕೆಯ ನಂತರ ಈ ೯ ಜನ ಪೋಷಕ ಪ್ರತಿನಿಧಿಗಳು ಸೇರಿ ಪದನಿಮಿತ್ತ ಸದಸ್ಯರು ಹಾಗೂ ನಾಮ ನಿರ್ದೇಶನದ ಸದಸ್ಯರನ್ನು ನೇಮಕ ಮಾಡಿ ಎಸ್ ಡಿ ಎಂ ಸಿ ಯನ್ನು ರಚಿಸಲು ನಿರ್ಣಯ ಕೈಗೊಳ್ಳಬೇಕು.

**ಎಸ್ ಡಿ ಎಂ ಸಿ ಯ ಪ್ರಥಮ ಸಭೆ**

ಎಸ್ ಡಿ ಎಂ ಸಿ ಯ ರಚನೆಯಾದ ೭ ದಿನದೊಳಗೆ ಎಸ್ ಡಿ ಎಂ ಸಿ ಯ ಪ್ರಥಮ ಸಭೆಯನ್ನು ಸಭೆಯ ನಿರ್ಣಯ ಹಾಗೂ ಅಧ್ಯಕ್ಷರ ಸೂಚನೆ ಮೇರೆಗೆ ಕರೆಯಬೇಕು. ಈ ಸಭೆಯ ನಂತರ ಪ್ರತೀ ತಿಂಗಳಿಗೂ ಒಮ್ಮೆ ಸಭೆ ಸೇರಿ ಶಾಲೆಯ ಪ್ರಗತಿಯ ಬಗ್ಗೆ ಚರ್ಚಿಸಿ ಕ್ರಮ ಕೈಗೊಳ್ಳಬೇಕು.

ಎಸ್ ಡಿ ಎಂ ಸಿ ಯು ರಚನೆಯಾದ ದಿನದಿಂದ ಮೂರು ವರ್ಷಗಳವರೆಗೆ ಅಸ್ತಿತ್ವದಲ್ಲಿರುತ್ತದೆ. ಮುರು ವರ್ಷದ ನಂತರ ಹೊಸ ಎಸ್ ಡಿ ಎಂ ಸಿ ರಚನೆಗಾಗಿ ಈ ಮೇಲೆ ಹೇಳಿದ ಪ್ರಕ್ರಿಯೆಯಂತೆಯೇ ಕ್ರಮ ಕೈಗೊಳ್ಳತಕ್ಕದ್ದು. ಎಸ್ ಡಿ ಎಂ ಸಿ ಅವಧಿ ಪೂರ್ಣಗೊಳ್ಳುವ ವರ್ಷದ ಜೂನ್ ತಿಂಗಳಲ್ಲಿಯೇ ಮೇಲಿನ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು.

ಪ್ರಗತಿ ಪರಿಶೀಲನೆಗಾಗಿ ಪ್ರತೀ ಶೈಕ್ಷಣಿಕ ವರ್ಷದಲ್ಲಿ ಮೂರು ಬಾರಿ ಅಂದರೆ ಜುಲೈ, ನವೆಂಬರ್ ಹಾಗೂ ಪೆಬ್ರವರಿ ತಿಂಗಳಿನಲ್ಲಿ ಪೋಷಕ ಸಭೆಯು ಸೇರುತ್ತದೆ. ಪೋಷಕ ಪ್ರತಿನಿಧಿಗಳ / ಪೋಷಕರ ಸದಸ್ಯತ್ವವು ಮಗು ಶಾಲೆಯಲ್ಲಿರುವವರೆಗೆ ಮಾತ್ರ ಅಸ್ತಿತ್ವದಲ್ಲಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ
ಎಂ. ಸಿ. ಪೂಣಚ್ಚ
(ಎಂ.ಸಿ.ಪೂಣಚ್ಚ) 8/5/01
ಸರ್ಕಾರದ ಅಧೀನ ಕಾರ್ಯದರ್ಶಿಗಳು
ಶಿಕ್ಷಣ ಇಲಾಖೆ

ಗೆ : ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು. - ಮುಂದಿನ ವಾರದ ರಾಜ್ಯಪತ್ರದಲ್ಲಿ ಪ್ರಕಟಿಸಿ ೧೦೦೦ ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸಿಕೊಡುವಂತೆ ಕೋರಿದೆ.

ಪ್ರತಿ :

೧) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
೨) ನಿರ್ದೇಶಕರು (ಪ್ರಾಥಮಿಕ / ಪ್ರೌಢ ಶಿಕ್ಷಣ / ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ), ಸಾ.ಶಿ.ಇ., ಬೆಂಗಳೂರು.
೩) ಜಿಲ್ಲಾ ಪಂಚಾಯತ್ ನ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
೪) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು.
೫) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು.
೬) ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ, ಪ್ರಾಥಮಿಕ / ಪ್ರೌಢ / ಸೇವೆಗಳು / ಸಾಮಾನ್ಯ ಶಾಖೆ. ೭) ಹೆಚ್ಚುವರಿ ಪ್ರತಿಗಳು.

C:\My Documents\Samudaava.doc

ಅನುಬಂಧ - 03

(6)

7th order

date - 28-07-2009

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿನ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಕಾರ್ಯಗಳ ಬಗ್ಗೆ.

ಓದಲಾಗಿದೆ :
1] ಸರ್ಕಾರದ ಆದೇಶ ಸಂಖ್ಯೆ. ಇಡಿ 01 ಪಿಬಿಎಸ್ 2001,ದಿ:28-04-2001.
2] ಸರ್ಕಾರದ ಆದೇಶ ಸಂಖ್ಯೆ. ಇಡಿ 01 ಪಿಬಿಎಸ್ 2001,ದಿ:16-08-2001.
3] ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ದಿ:21-01-2008ರ ಪತ್ರ ಸಂಖ್ಯೆ. ಎಸ್.ಡಿ.ಎಂ.ಸಿ.ರಚನೆ 06/2006-07.
4] ಸರ್ಕಾರದ ಆದೇಶ ಸಂಖ್ಯೆ. ಇಡಿ 249 ಎಲ್‌ಬಿಪಿ 2007,ದಿ:11-03-2008.

* * * * *

ಪ್ರಸ್ತಾವನೆ :-

ಕರ್ನಾಟಕ ರಾಜ್ಯದಲ್ಲಿ ಶಾಲಾ ಶಿಕ್ಷಣದಲ್ಲಿ ಗುಣಾತ್ಮಕ ಬದಲಾವಣೆ ತರಲು ಹಾಗೂ ಶಾಲಾ ಆಡಳಿತದಲ್ಲಿ ಸಮುದಾಯದ ಸಕ್ರಿಯ ಪಾತ್ರವನ್ನು ಖಚಿತಪಡಿಸಲು ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿಯ ಸಮಿತಿಯ ರಚನೆಗೆ ಮೇಲೆ[1] ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅನುಮತಿಯನ್ನು ನೀಡಲಾಗಿದೆ. ಈ ಆದೇಶದಲ್ಲಿ ಶಾಲಾ ಅಭಿವೃದ್ಧಿಗಾಗಿ, ಸಮಿತಿಯ ಹೆಸರಿನಲ್ಲಿ ಬ್ಯಾಂಕಿನಲ್ಲಿ ಒಂದು ಖಾತೆ ತೆರೆದು, ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಜಂಟಿಯಾಗಿ ಖಾತೆಯನ್ನು ನಿರ್ವಹಿಸತಕ್ಕದ್ದೆಂದು ಹಾಗೂ ಇತರೆ ಕಾರ್ಯನಿರ್ವಹಣೆ ಬಗ್ಗೆ ಸವಿಸ್ತಾರವಾದ ಸೂಚನೆಗಳನ್ನು ಹೊರಡಿಸಲಾಗಿದೆ. ಮೇಲೆ[2] ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳಿಗೆ ಆಯಾ ಶಾಲೆಗಳ ನೋಂದಾಯಿತ ಪೋಷಕರ ಪಟ್ಟಿಯಿಂದ ಸಂಬಂಧಿಸಿದ ವಿಧಾನಸಭಾ ಸದಸ್ಯರು 09 ಜನ ಪೋಷಕ ಪ್ರತಿನಿದಿಗಳನ್ನು ಹಾಗೂ ಅವರಲ್ಲಿ ಒಬ್ಬರನ್ನು ಅಧ್ಯಕ್ಷರನ್ನಾಗಿ ನಾಮ ನಿರ್ದೇಶನ ಮಾಡಲು ಅನುಮತಿ ನೀಡಲಾಗಿದೆ. ಅದರಂತೆ ಪ್ರೌಢ ಶಾಲೆಗಳಲ್ಲಿ ವಿಧಾನಸಭಾ ಸದಸ್ಯರೆ ಅಧ್ಯಕ್ಷರಾಗಿರುತ್ತಾರೆ.

ರಾಜ್ಯದಲ್ಲಿ ವಿಧಾನಸಭೆಯು ವಿಸರ್ಜನೆಗೊಂಡು, ರಾಷ್ಟ್ರಪತಿ ಆಳ್ವಿಕೆ ಜಾರಿಯಲ್ಲಿದ್ದುದರಿಂದ, ಬ್ಯಾಂಕಿನಿಂದ ಜಂಟಿ ಖಾತೆಯಿಂದ ಹಣ ಪಡೆಯಲು ತೊಂದರೆಯಾಗಿದ್ದನ್ನು ಗಮನಿಸಿ, ಮೇಲೆ[3] ರಲ್ಲಿ

ಓದಲಾದ ಪತ್ರದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ತಾತ್ಕಾಲಿಕವಾಗಿ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಸಂಬಂಧಿಸಿದ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಂಟಿಯಾಗಿ ಬ್ಯಾಂಕಿನಿಂದ ಹಣ ಪಡೆದು ಶಾಲಾಭಿವೃದ್ಧಿ ಕಾರ್ಯ ನಿರ್ವಹಿಸುವಂತೆ ಸೂಕ್ತ ಆದೇಶ ಹೊರಡಿಸಲು ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಅದರಂತೆ ಮೇಲೆ [4] ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಂಟಿಯಾಗಿ ಬ್ಯಾಂಕಿನಿಂದ ಹಣ ಪಡೆದು, ಶಾಲಾ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಿಕೊಂಡು ಹೋಗಲು ಆದೇಶಿಸಲಾಗಿತ್ತು. ಈಗ ಚುನಾಯಿತ ಸರ್ಕಾರ ಅಸ್ತಿತ್ವದಲ್ಲಿದ್ದು, ಚುನಾಯಿತ ಜನಪ್ರತಿನಿಧಿಗಳು ಇರುವುದರಿಂದ, ದಿನಾಂಕ:16-03-2008ರ ಸರ್ಕಾರದ ಆದೇಶದಲ್ಲಿನ ಸೂಚನೆಗಳನ್ನು ಪುನರ್ ಪರಿಶೀಲಿಸಲಾಗಿದೆ. ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ 105 ಎಸ್‌ಒಹೆಚ್ 2008, ಬೆಂಗಳೂರು, ದಿನಾಂಕ 28-07-09**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ ಇಡಿ 249 ಎಲ್‌ಬಿಪಿ 2007. ದಿನಾಂಕ:11-03-2008ನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ. ಮುಂದುವರೆದು, ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ದಿನಾಂಕ:11-03-2008ರ ಆದೇಶ ಜಾರಿಗೆ ಬರುವುದಕ್ಕಿಂತ ಮುಂಚೆ, ದಿನಾಂಕ:28-04-2001ರ ಆದೇಶದಲ್ಲಿ ಸೂಚಿಸಿರುವಂತೆ, ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಜಂಟಿಯಾಗಿ ಖಾತೆಯಿಂದ ಹಣ ಪಡೆದು, ಸರ್ಕಾರಿ ಪ್ರೌಢಶಾಲೆ ಶಾಲಾಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಿಕೊಂಡು ಹೋಗಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

[ ಹೆಚ್.ಟಿ.ಜಯರಾಂ ]
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ. [ಪ್ರೌಢ]

ರವರಿಗೆ:

1) ಮಹಾಲೇಖಪಾಲರು – ಕರ್ನಾಟಕ, (ಎ ಮತ್ತು ಇ) ಬೆಂಗಳೂರು.
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗ/ಧಾರವಾಡ.
4) ನಿರ್ದೇಶಕರು (ಪ್ರೌಢಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5) ನಿರ್ದೇಶಕರು, ಅಲ್ಪಸಂಖ್ಯಾತ ಭಾಷಾ ಶಾಲೆಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
6) ಎಲ್ಲಾ ಉಪ ನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, (ನಿರ್ದೇಶಕರು, ಅಲ್ಪಸಂಖ್ಯಾತ ಭಾಷಾ ಶಾಲೆಗಳು, ಸಾರ್ವಜನಿಕ ಶಿಕ್ಷಣ ಇಲಾಖೆ. – ಇವರ ಮುಖಾಂತರ)
7) ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಆಪ್ತ ಶಾಖೆ, ವಿಧಾನಸೌಧ, ಬೆಂಗಳೂರು.
8). ರಾಜ್ಯದಲ್ಲಿನ ಎಲ್ಲಾ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳಿಗೆ.
[ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ]
9) ಸಂಯೋಜಕರು, ಮಾಹಿತಿ ಕೇಂದ್ರ, 6ನೇ ಮಹಡಿ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9) ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಅಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು–1.**

ಸಂಖ್ಯೆ: ಎಂ.ಸಿ.8/ಎಸ್.ಡಿ.ಎಂ.ಸಿ./06/2006–07

ದಿನಾಂಕ: 03.08.2009

## <u>ಸುತ್ತೋಲೆ</u>

ವಿಷಯ: ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳ ರಚನೆ ಬಗ್ಗೆ
ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: 105 ಎಸ್‌ಒಹೆಚ್ 2008, ಬೆಂಗಳೂರು, ದಿನಾಂಕ: 28.07.2009.

* * * * *

ಉಲ್ಲೇಖಿತ ಸರ್ಕಾರಿ ಆದೇಶ ಸಂಖ್ಯೆ: 105 ಎಸ್‌ಒಹೆಚ್ 2008, ಬೆಂಗಳೂರು, ದಿನಾಂಕ: 28.07.2009 ನ್ನು ಈ ಪತ್ರದೊಂದಿಗೆ ಲಗತ್ತಿಸಿ, ರಾಜ್ಯದಾದ್ಯಂತ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ರವಾನಿಸಿದೆ. ಸದರಿ ಸರ್ಕಾರಿ ಆದೇಶದ ಪ್ರತಿಗಳನ್ನು ತಮ್ಮ ತಮ್ಮ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಸರ್ಕಾರಿ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರಿಗೆ ತಲುಪಿಸುವ ಜವಾಬ್ದಾರಿ ಜಿಲ್ಲಾ ಉಪನಿರ್ದೇಶಕರದ್ದಾಗಿರುತ್ತದೆ. ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ <u>"ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ" ಗಳ ಕಾರ್ಯ ನಿರ್ವಹಣೆಗೆ ಸಂಬಂಧಿಸಿದಂತೆ, ಸರ್ಕಾರಿ ಆದೇಶದಲ್ಲಿ ನೀಡಲಾದ ನಿರ್ದೇಶನಗಳನ್ವಯ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.</u>

(ಎಸ್.ಎನ್.ಪ್ರತಿಮಾ) 6/8/09
ನಿರ್ದೇಶಕರು
ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಬೆಂಗಳೂರು

3/8/09 03/8/2009

<u>ಇವರಿಗೆ:</u> ರಾಜ್ಯದಾದ್ಯಂತ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮಾಹಿತಿ ಹಾಗೂ ಅಗತ್ಯ ತುರ್ತು ಕ್ರಮಕ್ಕಾಗಿ.

**SB C:\Documents and Settings\NEWUSER\My Documents\SDMC-10.doc**

ಅನುಬಂಧ-04 Present Order
-01- dated - 07-01-21.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳು ಹಾಗೂ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರೌಢಶಾಲಾ ವಿಭಾಗದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (School Development Moniterng Committee ಎಸ್.ಡಿ.ಎಂ.ಸಿ) ರಚಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 01 ಪಿಬಿಎಸ್ 2001, ದಿನಾಂಕ:28/04/2001.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 01 ಪಿಬಿಎಸ್ 2001, ದಿನಾಂಕ:16/08/2001.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 249 ಎಲ್‌ಬಿಪಿ 2007, ದಿನಾಂಕ:11/03/2008.
4. ಸರ್ಕಾರದ ಆದೇಶ ಸಂಖ್ಯೆ:105 ಎಸ್‌ಓಹೆಚ್ 2008, ದಿನಾಂಕ:28/07/2009.
5. ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:80352/2009, ದಿ:05/02/2009ರಲ್ಲಿ ನೀಡಿದ ತೀರ್ಪು.
6. ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ಇವರು ಏಕ ಕಡತದಲ್ಲಿ ಸಲ್ಲಿಸಿರುವ ದಿನಾಂಕ:06/01/2019ರ ಪ್ರಸ್ತಾವನೆ.

16 JAN 2021

** ** **

ಪ್ರಸ್ತಾವನೆ:

ಕರ್ನಾಟಕ ರಾಜ್ಯದಲ್ಲಿ ಶಾಲಾ ಶಿಕ್ಷಣದಲ್ಲಿ ಗುಣಾತ್ಮಕ ಬದಲಾವಣೆ ತರಲು ಹಾಗೂ ಶಾಲಾ ಆಡಳಿತದಲ್ಲಿ ಸಮುದಾಯದ ಸಕ್ರಿಯ ಪಾತ್ರವನ್ನು ಖಚಿತಪಡಿಸಲು ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ರಚನೆಗೆ ಮೇಲೆ-1ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಸರ್ಕಾರದ ಅನುಮತಿಯನ್ನು ನೀಡಲಾಗಿದೆ. ಈ ಆದೇಶದಲ್ಲಿ ಶಾಲಾಭಿವೃದ್ಧಿಗಾಗಿ ಸಮಿತಿಯ ಹೆಸರಿನಲ್ಲಿ ಬ್ಯಾಂಕ್‌ನಲ್ಲಿ ಒಂದು ಖಾತೆಯನ್ನು ತೆರೆದು ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಜಂಟಿಯಾಗಿ ಖಾತೆಯನ್ನು ನಿರ್ವಹಿಸತಕ್ಕದ್ದು ಎಂದು ಹಾಗೂ ಇತರೆ ಕಾರ್ಯ ನಿರ್ವಹಣೆಗಳ ಬಗ್ಗೆ ಸೂಚನೆಗಳನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ದಿನಾಂಕ:14/08/2001ರ ಆದೇಶದಲ್ಲಿ ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳ ಆಯಾ ಶಾಲೆಗಳ ನೊಂದಾಯಿತ ಪೋಷಕರ ಪಟ್ಟಿಯಿಂದ ಸಂಬಂಧಿಸಿದ ವಿಧಾನ ಸಭಾ ಸದಸ್ಯರು 09 ಜನ ಪೋಷಕ ಪ್ರತಿನಿದಿಗಳನ್ನು ಹಾಗೂ ಅವರಲ್ಲಿ ಒಬ್ಬರನ್ನು ಅಧ್ಯಕ್ಷರನ್ನಾಗಿ ನಾಮ ನಿರ್ದೇಶನ ಮಾಡಲು ಅನುಮತಿಸಲಾಗಿದೆ. ಅದರಂತೆ ಪ್ರೌಢಶಾಲೆಗಳಲ್ಲಿ ವಿಧಾನ ಸಭಾ ಸದಸ್ಯರುಗಳು ಅಧ್ಯಕ್ಷರಾಗಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(3)ರ ದಿನಾಂಕ:11/03/2008ರ ಸರ್ಕಾರದ ಆದೇಶದಲ್ಲಿ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಂಟಿಯಾಗಿ ಬ್ಯಾಂಕಿನಿಂದ ಹಣ ಪಡೆದು ಶಾಲಾ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಿಕೊಂಡು ಹೋಗಲು ಆದೇಶಿಸಲಾಗಿದ್ದು, ತದನಂತರ ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಆದೇಶದಲ್ಲಿ ದಿನಾಂಕ:11/03/2008ರ ಆದೇಶವನ್ನು ಹಿಂಪಡೆದು ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಸೂಚಿಸಿರುವಂತೆ ಅಧ್ಯಕ್ಷರು

ಹಾಗೂ ಕಾರ್ಯದರ್ಶಿಗಳು ಜಂಟಿಯಾಗಿ ಹಣ ಪಡೆದು ಸರ್ಕಾರಿ ಪ್ರೌಢಶಾಲಾ ಅಭಿವೃದ್ಧಿ ಕಾರ್ಯಗಳನ್ನು ನಿರ್ವಹಿಸಿಕೊಂಡು ಹೋಗಲು ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ-5ರ ದಿನಾಂಕ:05/02/2009ರ ನ್ಯಾಯಾಲಯದ ತೀರ್ಪಿನ ಹಿನ್ನೆಲೆಯಂತೆ, ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ಇವರು ಸರ್ಕಾರದ ಆದೇಶ ಸಂಖ್ಯೆ ಇಡಿ 01 ಪಿಬಿಎಸ್ 2001, ದಿನಾಂಕ:16/08/2001ರ ಆದೇಶದಲ್ಲಿ ರಾಜ್ಯದ ಪ್ರತಿಯೊಂದು ಸರ್ಕಾರಿ ಪ್ರೌಢಶಾಲೆಗಳ ಹಾಗೂ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರೌಢಶಾಲಾ ವಿಭಾಗದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳಿಗೆ ಸಂಬಂಧಿಸಿದ ವಿಧಾನ ಸಭಾ ಸದಸ್ಯರು ಅಧ್ಯಕ್ಷರಾಗಿರುತ್ತಾರೆ ಹಾಗೂ ಅವರಿಂದ ಆಯಾ ಪ್ರೌಢಶಾಲೆಯ ನೊಂದಾಯಿತ ಪೋಷಕರ ಪಟ್ಟಿಯಿಂದ ನಾಮ ನಿರ್ದೇಶನ ಮಾಡಲ್ಪಡುವ 09 ಪೋಷಕರ ಪ್ರತಿ ನಿಧಿಗಳು ಸದಸ್ಯರಾಗಿರುತ್ತಾರೆಯೆಂದು ನಿರ್ಧಿಷ್ಟ ಪಡಿಸಿ ಆದೇಶಿಸಿರುತ್ತದೆ. ಈ ಕಾರಣಗಳಿಂದ ದಿ:28/04/2001ರ ಆದೇಶದಂತೆ ನೀಡಿರುವ ನಿರ್ದೇಶನಗಳಂತೆ ಪ್ರೌಢಶಾಲೆಗಳಲ್ಲಿ ಎಸ್.ಡಿ.ಎಂ.ಸಿ ರಚನೆ ಹಾಗೂ ಅಧ್ಯಕ್ಷರ ಆಯ್ಕೆ ಮಾಡಬೇಕೇ ಅಥವಾ ದಿ:16/08/2008ರ ಆದೇಶದಂತೆ ಕ್ರಮವಹಿಸಬೇಕೆ ಎಂಬುದರ ಕುರಿತು ಸ್ಪಷ್ಟೀಕರಣ ಕೋರಿರುತ್ತಾರೆ.

ಅದರಂತೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಇಡಿ 71 ಎಸ್ಓಹೆಚ್ 2019

ಬೆಂಗಳೂರು, ದಿನಾಂಕ:07ನೇ ಜನವರಿ 2021

ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲೆಗಳಲ್ಲಿ ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ ರಚನೆಗೆ ಸಂಬಂಧಿಸಿದಂತೆ, ಸರ್ಕಾರಿ ಪ್ರೌಢಶಾಲೆಗಳ ಹಾಗೂ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರೌಢಶಾಲಾ ವಿಭಾಗದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳಿಗೆ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳನ್ನು ಈ ಕೆಳಕಂಡಂತೆ ಆಯ್ಕೆ ಮಾಡತಕ್ಕದ್ದು.

ಎಸ್.ಡಿ.ಎಂ.ಸಿಯ ಅಧ್ಯಕ್ಷರು **ಹಾಗೂ ಕಾರ್ಯದರ್ಶಿಗಳ ಆಯ್ಕೆ:-**

1. **09 ಜನ ಪೋಷಕ ಪ್ರತಿನಿಧಿಗಳಿಂದ ಒಬ್ಬರನ್ನು ಎಸ್.ಡಿ.ಎಂ.ಸಿ ಅಧ್ಯಕ್ಷರೆಂದು ಬಹುಮತದಿಂದ ಆರಿಸುವುದು.**
2. **ಆಯಾಯ ಎಸ್.ಡಿ.ಎಂ.ಸಿ ಪದನಿಮಿತ್ತ ಸದಸ್ಯರಾದ ಆಯಾಯ ಶಾಲೆಯ ಮುಖ್ಯ ಗುರುಗಳು/ ಉಪಪ್ರಾಂಶುಪಾಲರು ಆಯಾಯ ಎಸ್.ಡಿ.ಎಂ.ಸಿಯ ಸದಸ್ಯ ಕಾರ್ಯದರ್ಶಿ ಹಾಗೂ ಖಜಾಂಚಿಗಳಾಗಿರುವುದು.**
3. **ಉಳಿದಂತೆ, ಸರ್ಕಾರದ ಆದೇಶ ಸಂಖ್ಯೆ: ಇಡಿ 01 ಪಿಬಿಎಸ್ 2001, ದಿನಾಂಕ:25/04/2001ರ ಇತರೆ ಕಾರ್ಯಸೂಚಿಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.**

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**

ಮತ್ತು ಅವರ **ಹೆಸರಿನಲ್ಲಿ,**

**(ಬಿ.ಎನ್ ಭಾಗ್ಯ)**

**ಸರ್ಕಾರದ ಅಧೀನ ಕಾರ್ಯದರ್ಶಿ(ಹೆ.ಪ್ರ)**

**ಶಿಕ್ಷಣ ಇಲಾಖೆ.ಪ್ರೌಢಶಿಕ್ಷಣ।**

7.1.2021

ಇವರಿಗೆ:

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

ಬೆಂಗಳೂರು

... ಧಾರವಾಡ / ಗುಲ್ಬರ್ಗ

... ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ...

... ಇಲಾಖೆ, ಆಯುಕ್ತರ ಕಛೇರಿ ...

... ಕಾರ್ಯನಿರ್ವಾಹಕ ಅಧಿಕಾರಿಗಳು (...

... ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಸಂ...

... ಕಚೇರಿ ಪ್ರತಿ

15 JAN 2021

I<sup></sup>st Order Copy (59)
Date :- 28-04-2001
ಅನುಬಂಧ - 1

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ
ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ.)
ಗಳನ್ನು ರಚಿಸುವ ಬಗ್ಗೆ.

ಓದಲಾಗಿದೆ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಪ್ರಸ್ತಾವನೆ ಸಂಖ್ಯೆ:ನಿ(ಅ.ಸಂ.)
ಆ.ಶಾ/ಕ.ಶಿ.ಕಾ.ತಿ-೧/೨೦೦೦-೦೧, ದಿನಾಂಕ: [illegible]-೨೦೦೧

೦೦೦೦

**ಪ್ರಸ್ತಾವನೆ:-**

ಮೇಲೆ ಓದಲಾದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಪ್ರಸ್ತಾವನೆಯಲ್ಲಿ ಡಾ. ರಾಜಾ ರಾಮಣ್ಣರವರ ಅಧ್ಯಕ್ಷತೆಯ ಕಾರ್ಯತಂಡದ ಮಧ್ಯಂತರ ವರದಿಯ ಶಿಫಾರಸ್ಸಿನಂತೆ ಕರ್ನಾಟಕ ರಾಜ್ಯದ ಶಾಲಾ ಶಿಕ್ಷಣದಲ್ಲಿ ಗುಣಾತ್ಮಕ ಬದಲಾವಣೆ ತರಲು ಹಾಗೂ ಶಾಲಾ ಆಡಳಿತದಲ್ಲಿ ಸಮುದಾಯದ ಸಕ್ರಿಯ ಪಾತ್ರವನ್ನು ಖಚಿತ ಪಡಿಸಲು ಹಾಗೂ ತತ್ಸಂಬಂಧಿಯಾದ ವಿಷಯಗಳನ್ನು ಕುರಿತು ಶಿಕ್ಷಣ ಕಾಯ್ದೆಗೆ ತಿದ್ದುಪಡಿಯನ್ನು ಸೂಚಿಸಲಾಗಿದೆ.

**ಈ ಕೆಳಗಿನ ಕಾರಣಗಳಿಗಾಗಿ ಈ ತಿದ್ದುಪಡಿಯು ಅವಶ್ಯಕವಾಗಿದೆ**

೧) ರಾಷ್ಟ್ರೀಯ ಶಿಕ್ಷಣ ನೀತಿಯನ್ವಯ ಪ್ರಾಥಮಿಕ ಶಿಕ್ಷಣದ ಸಾರ್ವತ್ರೀಕರಣವನ್ನು ಸಾಧಿಸಲು-
೨) ಶಾಲೆಗಳು ಪರಿಣಾಮಕಾರಿಯಾಗಿ ಕೆಲಸ ಮಾಡುವುದನ್ನು ಖಚಿತಪಡಿಸಿಕೊಳ್ಳಲು-
೩) ತಮ್ಮ ಮಕ್ಕಳ ಏಳಿಗೆಯ ಬಗ್ಗೆ ಸದಾ ಕಾಳಜಿಯುಳ್ಳ ಪೋಷಕರು/ಪಾಲಕರು ಶಿಕ್ಷಣ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮಾಡಲು-
೪) ಶಿಕ್ಷಣ ವ್ಯವಸ್ಥೆಯನ್ನು ವಿಕೇಂದ್ರೀಕರಿಸಿ ಶಾಲಾ ಆಡಳಿತವನ್ನು ಸುಧಾರಿಸಲು-
೫) ಶಿಕ್ಷಕರನ್ನು ಪ್ರೇರೇಪಿಸಿ ಅವರ ಜವಾಬ್ದಾರಿಯನ್ನು ಹೆಚ್ಚಿಸಲು-
೬) ಗ್ರಾಮ ಶಿಕ್ಷಣ ಸಮಿತಿಗಳ ರಚನೆಯಲ್ಲಿ ಉಳಿದುಕೊಂಡ ನ್ಯೂನತೆಗಳನ್ನು ಹೋಗಲಾಡಿಸಲು-
೭) ಶಾಲಾ ಯೋಜನೆ ಹಾಗೂ ಅಭಿವೃದ್ಧಿಗಾಗಿ ಶಾಲೆಯನ್ನೇ ಒಂದು ಘಟಕವನ್ನಾಗಿ ಪರಿಗಣಿಸಿ, ಪ್ರಕಲ್ಪನಾತ್ಮಕ ದಾಖಲೆ (ವಿಜನ್ ಡಾಕ್ಯುಮೆಂಟ್) ತಯಾರಿಸಲು-
೮) ದಾಖಲಾತಿ / ಹಾಜರಾತಿ ಶಿಕ್ಷಣ ಗುಣಮಟ್ಟ ಸುಧಾರಣೆ ಕುರಿತಂತೆ ಇರುವ ಸಮಸ್ಯೆಗಳನ್ನು ಪರಿಹರಿಸಲು-
೯) ತರಗತಿಯ ಚಟುವಟಿಕೆಗಳನ್ನು ಶಿಸ್ತು ಬದ್ಧವಾಗಿ ಸಂಘಟಿಸಲು-
೧೦) ಸಂಪನ್ಮೂಲಗಳನ್ನು ಕ್ರೋಢೀಕರಿಸಲು -

ಶಿಕ್ಷಣ ಪ್ರಕ್ರಿಯೆಯಲ್ಲಿ ಸಮುದಾಯದ ಪಾಲ್ಗೊಳ್ಳುವಿಕೆ ಅನಿವಾರ್ಯವಾಗಿದೆ. ಈ [illegible] ಪ್ರಸ್ತುತ ಅಸ್ತಿತ್ವದಲ್ಲಿರುವ ಶಾಲಾ ಅಭಿವೃದ್ಧಿ ಸಮಿತಿ ಮತ್ತು ಗ್ರಾಮ ಶಿಕ್ಷಣ ಸಮಿತಿಗಳನ್ನು [illegible] ಶಾಲಾ ಮಟ್ಟದಲ್ಲಿ ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ, ಗ್ರಾಮ ಪಂಚಾಯತ್ [illegible]

(1)

ಅನುಬಂಧ - 05

I/179367/2021

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ) ರಚನೆ ಕುರಿತು ಮಾರ್ಗಸೂಚಿ ನೀಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಆದೇಶದ ಸಂಖ್ಯೆ: ಇಡಿ 04 ಯೋಸಕ 2017, ಬೆಂಗಳೂರು ದಿನಾಂಕ: 05.01.2018
2. ಸರ್ಕಾರದ ಆದೇಶದ ಸಂಖ್ಯೆ: ಇಡಿ 230 ಯೋಸಕ 2018, ದಿನಾಂಕ: 18.05.2019
3. ಮಾನ್ಯ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು ದಿನಾಂಕ:18.09.2018.
4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ: 11565/ಸಶಿಕ/ತ/ಕೆ.ಪಿ.ಎಸ್/ ಎಸ್.ಡಿ.ಎಂ.ಸಿ/ ರಚನೆ/2019-20

******

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1) ಮತ್ತು (2)ರ ರ ಸರ್ಕಾರಿ ಆದೇಶಗಳಲ್ಲಿ ಕರ್ನಾಟಕ ಸರ್ಕಾರವು "ಪ್ರತಿ ಮಗುವೂ ಶಾಲೆಯಲ್ಲಿ ಮತ್ತು ಉತ್ತಮ ಕಲಿಕೆಯೊಂದಿಗೆ" ಎಂಬ ಗುಣಮಟ್ಟದ ಶಿಕ್ಷಣ ನೀಡುವ ಜವಾಬ್ದಾರಿಯನ್ನು ಹೊಂದಿರುತ್ತದೆ. ವಿದ್ಯಾರ್ಥಿಗಳು ಉತ್ತಮವಾಗಿ ಕಲಿಯಲು ಸಹಕರಿಸುವಂತೆ ಶಾಲೆಗಳಲ್ಲಿ ಬೋಧನಾ ಪದ್ಧತಿಯನ್ನು ಸುಧಾರಿಸಲು ಕ್ರಮ ತೆಗೆದುಕೊಳ್ಳಬೇಕಾಗಿದೆ. ಈ ದೂರದೃಷ್ಠಿಯ ಹಿನ್ನೆಲೆಯಲ್ಲಿ, ಶಿಕ್ಷಕರು ಮತ್ತು ಇತರ ಸಂಪನ್ಮೂಲಗಳ ಬಳಕೆಯ ಸಮರ್ಪಕತೆಯನ್ನು ಸುಧಾರಿಸಲು, ಒಂದೇ ಭೌಗೋಳಿಕ ಸ್ಥಳಗಳಲ್ಲಿ ಅಸ್ತಿತ್ವದಲ್ಲಿರುವ ಶಾಲೆಗಳನ್ನು ಆಡಳಿತಾತ್ಮಕ, ಶೈಕ್ಷಣಿಕ ಮತ್ತು ಕ್ರಿಯಾತ್ಮಕ ಸಂಯೋಜನೆಯೊಂದಿಗೆ ಒಟ್ಟುಗೂಡಿಸಿ, 276 ಸಂಯೋಜಿತ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3)ರ ನಡವಳಿಯಲ್ಲಿ ರಾಜ್ಯದಲ್ಲಿ ಪ್ರಸ್ತುತ ಪೂರ್ವ ಪ್ರಾಥಮಿಕ ತರಗತಿಗಳಿಂದ ಪದವಿ ಪೂರ್ವ ಹಂತದ ವರೆಗಿನ ಕೆ.ಪಿ.ಎಸ್ ಶಾಲೆಗಳನ್ನು ರಾಜ್ಯಾದ್ಯಂತ

ಅನುಷ್ಠಾನಗೊಳಿಸಲಾಗಿರುತ್ತದೆ. ಈ ಶಾಲೆಗಳು ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ತರಗತಿಗಳನ್ನು ಹೊಂದಿದ್ದು ಅವುಗಳು ಪ್ರತ್ಯೇಕವಾಗಿ ಎಸ್.ಡಿ.ಎಂ.ಸಿ/ಪೋಷಕರ ಸಮಿತಿ ಒಳಗೊಂಡಿದ್ದು, ಅವುಗಳ ಬದಲಾಗಿ ಏಕ ಸಮಿತಿಯನ್ನು ರಚನೆ ಮಾಡಬೇಕಾಗಿರುತ್ತದೆ. ಇದಕ್ಕಾಗಿ ಎಸ್.ಡಿ.ಎಂ.ಸಿ ರಚನೆ ಹಾಗೂ ಅದರ ಕಾರ್ಯಚಟುವಟಿಕೆಯ ಕುರಿತು ಅಧಿಸೂಚನೆ ಹೊರಡಿಸಲು ನಿರ್ಣಯಿಸಲಾಯಿತು.

ಮೇಲೆ ಓದಲಾದ ಕ್ರಮಾಂಕ (4)ರ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರ ಏಕ ಕಡತ ಪ್ರಸ್ತಾವನೆಯಲ್ಲಿ 2017-18ನೇ ಸಾಲಿನ ಆಯವ್ಯಯ ಘೋಷಣೆಯಂತೆ ಶಿಕ್ಷಕರು ಮತ್ತು ಇತರ ಸಂಪನ್ಮೂಲಗಳ ಬಳಕೆಯ ಸಮರ್ಪಕತೆಯನ್ನು ಸುಧಾರಿಸಲು ಒಂದೇ ಭೌಗೋಳಿಕ ಸ್ಥಳಗಳಲ್ಲಿ ಅಸ್ತಿತ್ವದಲ್ಲಿರುವ 176 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯಲಾಗಿದ್ದು, ಸದರಿ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಪೂರ್ವ ಪ್ರಾಥಮಿಕ ತರಗತಿಯಿಂದ 12ನೇ ತರಗತಿಯವರೆಗೆ ಶಿಕ್ಷಣವನ್ನು ಒದಗಿಸಲಾಗುತ್ತಿದೆ. ಪ್ರಸ್ತುತ ಈ ಶಾಲೆಗಳಲ್ಲಿ ಕಿರಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ವಿವಿಧ ಎಸ್.ಡಿ.ಎಂ.ಸಿ ಗಳು ಅಸ್ತಿತ್ವದಲ್ಲಿದ್ದು, ವೈರುದ್ಯಗಳಿಂದ ಶಾಲಾ ಬೆಳವಣಿಗೆಯು ಕುಂಠಿತವಾಗುತ್ತದೆ. ಒಟ್ಟಾರೆ ಕೆ.ಪಿ.ಎಸ್ ಶಾಲೆಗೆ ಸಂಯೋಜಿತ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅವಶ್ಯಕತೆ ಇದ್ದು, ಕೆ.ಪಿ.ಎಸ್ ಶಾಲೆಗೆ ಸಂಬಂಧಿಸಿದಂತೆ ಎಸ್.ಡಿ.ಎಂ.ಸಿ ಸಂಯೋಜಿಸಲು, ಕರ್ನಾಟಕ ಪಬ್ಲಿಕ್ ಶಾಲೆಯ ಸಮಗ್ರ ಅಭಿವೃದ್ಧಿಗಾಗಿ ಪೂರ್ವ ಪ್ರಾಥಮಿಕ ತರಗತಿಯಿಂದ 12ನೇ ತರಗತಿಯವರೆಗೆ ಏಕ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು ರಚಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಇಪಿ 142 ಯೋಸಕ 2021
## ಬೆಂಗಳೂರು ದಿನಾಂಕ:26.10.2021

ಶಾಲಾ ಶಿಕ್ಷಣದಲ್ಲಿ ಗುಣಾತ್ಮಕ ಬದಲಾವಣೆ ತರಲು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಸ್ಥಾಪಿಸಲಾಗಿದ್ದು, ಸದರಿ ಶಾಲಾಡಳಿತದಲ್ಲಿ ಪೋಷಕರ ಹಾಗೂ ಸಮುದಾಯದ ಸಕ್ರಿಯ ಪಾಲ್ಗೊಳ್ಳುವಿಕೆಯನ್ನು ಖಚಿತಪಡಿಸಿಕೊಳ್ಳಲು ರಾಜ್ಯದ ಎಲ್ಲಾ ಕರ್ನಾಟಕ ಪಬ್ಲಿಕ್ ಶಾಲೆಗಳ ಸಮಗ್ರ ಅಭಿವೃದ್ಧಿಗಾಗಿ ಪೂರ್ವ ಪ್ರಾಥಮಿಕ ತರಗತಿಯಿಂದ 12ನೇ ತರಗತಿಯವರೆಗೆ ಏಕ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು ಈ ಕೆಳಕಂಡಂತೆ ರಚಿಸಲು ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಇವರಿಗೆ ಅನುಮತಿ ನೀಡಿ ಆದೇಶಿಸಿದೆ.

ಸದರಿ ಮೇಲುಸ್ತುವಾರಿಯನ್ನು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಇವರು ಜಂಟಿಯಾಗಿ ನಿರ್ವಹಿಸತಕ್ಕದ್ದು.

79367/2021

**I.ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ(ಎಸ್.ಡಿ.ಎಂ.ಸಿ) ಸಮಿತಿ ರಚನೆ:**

ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯು ಈ ಕೆಳಕಂಡ ಸದಸ್ಯರನ್ನು ಒಳಗೊಂಡಿರುತ್ತದೆ. ಪೋಷಕ ಸಭೆಯಿಂದ **16** ಜನ ಪೋಷಕ ಪ್ರತಿನಿಧಿಗಳನ್ನು ಆಯ್ಕೆ ಮಾಡಬೇಕು. ಈ ರೀತಿ ಆಯ್ಕೆ ಮಾಡುವ ಸಂದರ್ಭದಲ್ಲಿ ವಿವಿಧ ಪ್ರವರ್ಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಈ ಕೆಳಗಿನ ಮಾನದಂಡಗಳನ್ನು ಅನುಸರಿಸುವುದು.

ಉದಾಹರಣೆಗೆ: ಈ ಕೆಳಗಿನ ಸೂತ್ರವನ್ನು ಉಪಯೋಗಿಸಿ ಲೆಕ್ಕಾಚಾರ ಮಾಡತಕ್ಕದ್ದು:

ವಿವಿಧ ಪ್ರವರ್ಗಗಳ ಮಕ್ಕಳ ಸಂಖ್ಯೆ

ಸದಸ್ಯರ ಸಂಖ್ಯೆ:---------------------- *ಎಸ್.ಡಿ.ಎಂ.ಸಿ.ಗೆ ಆಯ್ಕೆ ಆಗಬೇಕಾದ ಒಟ್ಟು ಪಾಲಕರ ಸಂಖ್ಯೆ

ಶಾಲೆಯಲ್ಲಿನ ಒಟ್ಟು ಮಕ್ಕಳ ಸಂಖ್ಯೆ

ಉದಾಹರಣೆ : ತಂದೆ/ತಾಯಿ/ಪೋಷಕ ಸದಸ್ಯರ ಆಯ್ಕೆ ವಿಧಾನ :

ಶಾಲೆಯಲ್ಲಿ ಒಟ್ಟು 1023 ಮಕ್ಕಳಿದ್ದಾರೆ ಎಂದು ಭಾವಿಸೋಣ. ಇವರಲ್ಲಿ 648 ಪರಿಶಿಷ್ಟ ಜಾತಿ, 110 ಪರಿಶಿಷ್ಟ ಪಂಗಡ, 88 ಅಲ್ಪಸಂಖ್ಯಾತರು, 88 ಹಿಂದುಳಿದ ವರ್ಗ ಹಾಗೂ 89 ಸಾಮಾನ್ಯ ವರ್ಗದ ಮಕ್ಕಳಿದ್ದಾರೆ. ನಾವು ಆಯ್ಕೆ ಮಾಡಬೇಕಾಗಿರುವುದು 16 ಸದಸ್ಯರು.

ಪರಿಶಿಷ್ಟ ಜಾತಿಗೆ ಪ್ರಾತಿನಿಧ್ಯ = (648/1023) * 16 = 10.13 ಅಂದರೆ 10 ಜನ

ಪರಿಶಿಷ್ಟ ಪಂಗಡದ ಪ್ರಾತಿನಿಧ್ಯ = (110/1023) * 16 = 1.72 ಅಂದರೆ 2 ಜನ

ಅಲ್ಪಸಂಖ್ಯಾತ ವರ್ಗದ ಪ್ರಾತಿನಿಧ್ಯ = (88/1023) * 16 = 1.37 ಅಂದರೆ 1 ಜನ

ಹಿಂದುಳಿದ ವರ್ಗದ ಪ್ರಾತಿನಿಧ್ಯ = (88/1023) * 16 = 1.37 ಅಂದರೆ 1 ಜನ

ಸಾಮಾನ್ಯ ವರ್ಗದ ಪ್ರಾತಿನಿಧ್ಯ = (89/1023) * 16 = 1.39 ಅಂದರೆ 2 ಜನ

ಒಟ್ಟು ಸದಸ್ಯರು = 16 ಜನರು

16 ಸದಸ್ಯರ ಪೈಕಿ ಪೂರ್ವ ಪ್ರಾಥಮಿಕ ತರಗತಿಯಿಂದ 8ನೇ ತರಗತಿವರೆಗಿನ ವಿದ್ಯಾರ್ಥಿಗಳ ಪೋಷಕರಿಂದ 10 ಸದಸ್ಯರು, 9 ಮತ್ತು 10 ನೇ ತರಗತಿಗಳ ಪೋಷಕರಿಂದ 03 ಸದಸ್ಯರು ಹಾಗೂ 11 ಮತ್ತು 12ನೇ ತರಗತಿಗಳ ಪೋಷಕರಿಂದ 03 ಸದಸ್ಯರು; ಒಟ್ಟು 16 ಸದಸ್ಯರ ಪೈಕಿ ಶೇಕಡಾ 50 ರಷ್ಟು ಮಹಿಳಾ ಪ್ರತಿನಿಧಿಗಳಿರಬೇಕು. ಯಾವುದಾದರು ಪ್ರವರ್ಗದ ಮಕ್ಕಳ ಸಂಖ್ಯೆ ಕಡಿಮೆ ಇದ್ದಲ್ಲಿ ಹೆಚ್ಚಿನ ಸಂಖ್ಯೆಯ ಪ್ರವರ್ಗದ ಪೋಷಕರನ್ನು ಆಯ್ಕೆ ಮಾಡಬಹುದು.

ಪರಿಶಿಷ್ಟ ಜಾತಿಯ ಪೋಷಕರು ಲಭ್ಯವಿರದಿದ್ದಲ್ಲಿ ಪರಿಶಿಷ್ಟ ಪಂಗಡದವರಿಂದ ಆಯ್ಕೆ ಮಾಡುವುದು ಹಾಗೂ ಪರಿಶಿಷ್ಟ ಪಂಗಡ ಪೋಷಕರು ಲಭ್ಯವಿಲ್ಲದಿದ್ದಲ್ಲಿ ಪರಿಶಿಷ್ಟ ಜಾತಿಯ ಪೋಷಕರಿಂದ ಆಯ್ಕೆ ಮಾಡುವುದು. ಒಂದು ವೇಳೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ

(4)

I/179367/2021

ಪೋಷಕರು ಲಭ್ಯವಿಲ್ಲದಿದ್ದಲ್ಲಿ ಹಿಂದುಳಿದ ವರ್ಗಗಳ ಪೋಷಕರಿಂದ ಆಯ್ಕೆ ಮಾಡುವುದು. ಹಿಂದುಳಿದ ವರ್ಗಗಳ ಪೋಷಕರು ಲಭ್ಯವಿಲ್ಲದಿದ್ದಲ್ಲಿ ಸಾಮಾನ್ಯ ವರ್ಗದ ಪೋಷಕರನ್ನು ಆಯ್ಕೆ ಮಾಡುವುದು.

ಈ ರೀತಿ ಆಯ್ಕೆಯ ಸಂದರ್ಭದಲ್ಲಿ ಪ್ರತಿ ತರಗತಿಯಿಂದ ಪೋಷಕರ ಪ್ರಾತಿನಿಧ್ಯ ಖಾತರಿಪಡಿಸಿಕೊಳ್ಳುವುದು.

**II.** ಮುಂದುವರೆದು, ಕೆ.ಪಿ.ಎಸ್.ನ ಎಸ್.ಡಿ.ಎಂ.ಸಿ.ಯ ರಚನೆ/ವಿನ್ಯಾಸವು ಈ ಕೆಳಗಿನ ಅಂಶಗಳನ್ನು ಹೊಂದಿರಬೇಕು.

ಗೌರವ ಅಧ್ಯಕ್ಷರು : ಕೆ.ಪಿ.ಎಸ್ ಶಾಲಾ ವ್ಯಾಪ್ತಿಯ ಸನ್ಮಾನ್ಯ ಶಾಸಕರು

1. ಅಧ್ಯಕ್ಷರು : ಆಯ್ಕೆಯಾದ 16 ಜನ ಪೋಷಕರ ಪ್ರತಿನಿಧಿಗಳಿಂದ ಬಹುಮತವಿರುವ ಒಬ್ಬರನ್ನು ವಿಧಿವತ್ತಾಗಿ ರಚಿಸಲ್ಪಟ್ಟ ಪಾಲಕರ ಪರಿಷತ್ತಿನಿಂದ ಪ್ರಜಾಪ್ರಭುತ್ವ ಮಾದರಿಯಲ್ಲಿ ಎಸ್.ಡಿ.ಎಂ.ಸಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡುವುದು.
2. ಉಪಾಧ್ಯಕ್ಷರು : ತಂದೆ/ತಾಯಿ/ಪೋಷಕರಿಂದ ಎಸ್.ಡಿ.ಎಂ.ಸಿ ಸದಸ್ಯರಾಗಿ ಆಯ್ಕೆ ಆಗಿರುವ 16 ಸದಸ್ಯರ ಪೈಕಿ ಒಬ್ಬ ಪೋಷಕ ಪ್ರತಿನಿಧಿ.
3. ಪದನಿಮಿತ್ತ ಸದಸ್ಯರು (4)
   - ಶಾಲಾ ವ್ಯಾಪ್ತಿಯ ಗ್ರಾಮ ಪಂಚಾಯತ್ ಅಧ್ಯಕ್ಷರು ಅಥವಾ ಶಾಲಾ ವ್ಯಾಪ್ತಿಯ ನಗರ ಸಭೆ/ಪುರ ಸಭೆ/ಪಟ್ಟಣ ಪಂಚಾಯತ್/ಶಾಲಾ ವ್ಯಾಪ್ತಿಯ ವಾರ್ಡ್ ಸದಸ್ಯರು
   - ಶಾಲಾ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆ
   - ಶಾಲಾ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು
   - ಶಾಲಾ ವ್ಯಾಪ್ತಿಯ ವಿದ್ಯಾರ್ಥಿನಿಲಯದ ವಾರ್ಡನ್
4. ನಾಮನಿರ್ದೇಶಿತ ಸದಸ್ಯರು (11)
   - ಪೂರ್ವ ಪ್ರಾಥಮಿಕ ತರಗತಿಯಿಂದ 8ನೇ ತರಗತಿಯ ಹಂತದಲ್ಲಿರುವ ಮುಖ್ಯ ಶಿಕ್ಷಕರು
   - 6 ರಿಂದ 8ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ಇಬ್ಬರು ಪ್ರತಿನಿಧಿಗಳು (1- ವಿದ್ಯಾರ್ಥಿ ಮತ್ತು 1 ವಿದ್ಯಾರ್ಥಿನಿ).
   - 9 ರಿಂದ 12ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಂದ ತರಗತಿಗೆ ಒಬ್ಬ ಪ್ರತಿನಿಧಿ 2 ವಿದ್ಯಾರ್ಥಿಗಳು , 2-ವಿದ್ಯಾರ್ಥಿನಿಯರು
   - ಶಾಲೆಯನ್ನು ದತ್ತು ತೆಗೆದುಕೊಂಡ ವ್ಯಕ್ತಿ/ಸಂಘದ ಮುಖ್ಯಸ್ಥರು/ಶಾಲಾ ಕೊಠಡಿ ನಿರ್ಮಾಣ, ಆಟದ ಮೈದಾನ, ಶಾಲೆಗೆ ಭೂದಾನ/ ಹೆಚ್ಚಿನ ಮೌಲ್ಯದ

ನಗದು ಅಥವಾ ಉಪಕರಣಗಳನ್ನು ನೀಡಿದ ದಾನಿಗಳ ಪೈಕಿ ಅತಿ ಹೆಚ್ಚು ಕ್ರಿಯಾಶೀಲ ದಾನಿ

- ಶಾಲಾ ವ್ಯಾಪ್ತಿಯಲ್ಲಿ ವಾಸಿಸುವ ಒಬ್ಬ ಶಿಕ್ಷಣ ತಜ್ಞರು ಅಥವಾ ಒಬ್ಬ ನಿವೃತ್ತ ಶಿಕ್ಷಕರು
- ಸ್ಥಳೀಯ ಸ್ವಯಂ ಸೇವಾ ಸಂಘ ಅಥವಾ ಯುವಕ ಸಂಘ ಅಥವಾ ಯುವತಿ ಸಂಘಗಳ ಒಬ್ಬ ಪದಾಧಿಕಾರಿ.
- ಶಾಲೆಯಲ್ಲಿ ವ್ಯಾಸಂಗ ಮಾಡಿರುವ ಹಿರಿಯ ವಿದ್ಯಾರ್ಥಿಗಳಿಂದ ಒಬ್ಬರು ಸದಸ್ಯರು.

5.ಪದನಿಮಿತ್ತ ಸದಸ್ಯ ಕಾರ್ಯದರ್ಶಿ : ಕರ್ನಾಟಕ ಪಬ್ಲಿಕ್ ಶಾಲೆಯ ಪ್ರಾಂಶುಪಾಲರು

6.ಪದನಿಮಿತ್ತ ಜಂಟಿ ಸದಸ್ಯ ಕಾರ್ಯದರ್ಶಿ: ಕರ್ನಾಟಕ ಪಬ್ಲಿಕ್ ಶಾಲೆಯ ಉಪಪ್ರಾಂಶುಪಾಲರು ಅಥವಾ ಪ್ರೌಢಶಾಲಾ ಮುಖ್ಯ ಶಿಕ್ಷಕರು

**III.ಎಸ್.ಡಿ.ಎಂ.ಸಿ.ಯ ಉಪಸಮಿತಿಗಳು. (ಸ್ಥಾಯಿ ಸಮಿತಿಗಳು)**

ಎಸ್.ಡಿ.ಎಂ.ಸಿ.ಯ ಉಪಸಮಿತಿಗಳಾದ(ಸ್ಥಾಯಿ ಸಮಿತಿಗಳು) - ಭೌತಿಕ ಸೌಲಭ್ಯಗಳ ಮೇಲುಸ್ತುವಾರಿ ಸಮಿತಿ (ಸಿವಿಲ್ ಕಾಮಗಾರಿಗಳು), ಶೈಕ್ಷಣಿಕ ಗುಣಮಟ್ಟ ಖಾತರಿ ಸಮಿತಿ ಹಾಗೂ ಮಕ್ಕಳ ಸುರಕ್ಷತಾ ಸಮಿತಿ ಈ ಮೂರು ಉಪಸಮಿತಿಗಳು ಕಾರ್ಯನಿರ್ವಹಿಸಲಿದ್ದು, ಈ ಸಮಿತಿಗಳಲ್ಲಿ ಅಧ್ಯಕ್ಷರು ಹಾಗೂ ನಿಗದಿತ ಸದಸ್ಯರ ಆಯ್ಕೆ ಸಂಬಂಧ ಪೋಷಕರ ಪ್ರತಿನಿಧಿಗಳು, ನಾಮನಿರ್ದೇಶಿತ ಸದಸ್ಯರು ಹಾಗೂ ಪದನಿಮಿತ್ತ ಸದಸ್ಯರಲ್ಲಿ ಸಮಿತಿವಾರು ಒಬ್ಬರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿಕೊಳ್ಳುವುದು. ಆಯ್ಕೆ ಮಾಡುವ ಬಗ್ಗೆ ಎಸ್.ಡಿ.ಎಂ.ಸಿ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ, ತೀರ್ಮಾನಿಸುವುದು. ಈ ಮೂರು ಸಮಿತಿಗಳಿಗೆ ಪ್ರಾಂಶುಪಾಲರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ. ಸದರಿ ಸಭೆಗಳಲ್ಲಿ ಕೈಗೊಂಡ ತೀರ್ಮಾನಗಳನ್ನು ಎಸ್.ಡಿ.ಎಂ.ಸಿ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಅಂತಿಮ ನಿರ್ಧಾರ ಕೈಗೊಂಡು ಕಾರ್ಯಗತಗೊಳಿಸುವುದು.

**a.ಭೌತಿಕ ಸೌಲಭ್ಯಗಳ ಮೇಲುಸ್ತುವಾರಿ ಸಮಿತಿ (ಸಿವಿಲ್ ಕಾಮಗಾರಿಗಳು) (1+1+5) [ಅಧ್ಯಕ್ಷರು, ಸದಸ್ಯ ಕಾರ್ಯದರ್ಶಿಗಳು ಹಾಗೂ ಸದಸ್ಯರು]**

- ಕೆ.ಪಿ.ಎಸ್ ಶಾಲೆಗೆ ಅಗತ್ಯವಾದ ಸಿವಿಲ್ ಕಾಮಗಾರಿಗಳ ಸಂದರ್ಭದಲ್ಲಿ ಈ ಸಮಿತಿಯು ನೀಲಿನಕ್ಷೆ ತಯಾರಿಕೆ, ಅಂದಾಜು ಪಟ್ಟಿ ತಯಾರಿಕೆ ಕಾಮಗಾರಿ ಪೂರೈಕೆ ಕುರಿತಂತೆ ಕ್ರಿಯಾ ಯೋಜನೆಯನ್ನು ತಯಾರಿಸಬೇಕು.

- ಸಿವಿಲ್ ಕಾಮಗಾರಿ ನಿರ್ವಹಣೆ ಸಂಬಂಧ ಇಲಾಖಾ ಮಾರ್ಗಸೂಚಿಯನ್ವಯ ಕಾರ್ಯ ನಿರ್ವಹಣೆ ಹಾಗೂ ಕಾಲಕಾಲಕ್ಕೆ ಸರ್ಕಾರ ಹೊರಡಿಸಿರುವ ಆದೇಶಗಳಿಗೆ ಅನುಗುಣವಾಗಿ ಅನುಪಾಲನೆ ಮಾಡುವುದು.
- ಕಾಮಗಾರಿಯು ಗುಣಮಟ್ಟದಿಂದ ಕೂಡಿರುವುದನ್ನು ಖಾತರಿ ಪಡಿಸಿಕೊಳ್ಳುವುದು. ಶಾಲಾ ಆಸ್ತಿಯ ಸಂರಕ್ಷಣೆ ಹಾಗೂ ನಿರ್ವಹಣೆ ಮಾಡುವುದು.

**b.ಶೈಕ್ಷಣಿಕ ಗುಣಮಟ್ಟ ಖಾತರಿ ಸಮಿತಿ – (1+1+5) [ಅಧ್ಯಕ್ಷರು, ಸದಸ್ಯ ಕಾಯರ್ಯದರ್ಶಿಗಳು ಹಾಗೂ ಸದಸ್ಯರು]**

- ಮಕ್ಕಳು ಹಾಗೂ ಶಿಕ್ಷಕರು ನಿರಂತರವಾಗಿ ಸಕಾಲಕ್ಕೆ ಶಾಲೆಗೆ ಹಾಜರಾಗುವುದನ್ನು ಖಾತರಿಪಡಿಸಿಕೊಳ್ಳುವುದು.
- ವಾರ್ಷಿಕ ಕಾರ್ಯಸೂಚಿ ಮತ್ತು ವೇಳಾಪಟ್ಟಿಯಂತೆ ಪಾಠಬೋಧನೆ ನಡೆಯುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
- ಮಕ್ಕಳ ಕಲಿಕಾ ಪ್ರಗತಿಯನ್ನು ಅವಲೋಕಿಸಲು ಕಾಲ ಕಾಲಕ್ಕೆ ಪೋಷಕರು ಶಾಲೆಗೆ ಬರುವಂತೆ ಜಾಗೃತಿ ಮಾಡಿಸುವುದು.
- ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಹಾಗೂ ಪೋಷಕರಿಗೆ ಕೌನ್ಸಿಲಿಂಗ್ ಮಾಡಿಸುವುದು.
- ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳ ಸಹಕಾರದಿಂದ ಶಾಲಾ ಮಕ್ಕಳಿಗೆ ಅನುಕೂಲವಾಗುವ ಶೈಕ್ಷಣಿಕ ಮತ್ತು ವೃತ್ತಿ ಮಾರ್ಗದರ್ಶನ ನೀಡುವ ವ್ಯವಸ್ಥೆ ಮಾಡುವುದು.
- ಶಾಲೆಗೆ ಪದೇ ಪದೇ ಗೈರು ಹಾಜರಾಗುವ ಅಥವಾ ಶಾಲೆ ಬಿಟ್ಟ ಮಕ್ಕಳ ಪೋಷಕರಿಗೆ ಸೂಕ್ತ ತಿಳಿವಳಿಕೆ ನೀಡುವುದು.
- ಪ್ರತಿಭಾನ್ವಿತ ಮಕ್ಕಳಿಗೆ ಉತ್ತೇಜನ ನೀಡುವುದು.
- ಶಾಲಾ ಶೈಕ್ಷಣಿಕ ಯೋಜನೆ ಸಿದ್ಧಪಡಿಸಿ, ಅನುಷ್ಠಾನಗೊಳಿಸುವುದು.

**c.ಮಕ್ಕಳ ಸುರಕ್ಷತಾ ಸಮಿತಿ (1+1+5) [ಅಧ್ಯಕ್ಷರು, ಸದಸ್ಯ ಕಾರ್ಯದರ್ಶಿಗಳು ಹಾಗೂ ಸದಸ್ಯರು]**

ಈ ಸಮಿತಿಯಲ್ಲಿ ಗರಿಷ್ಠ ಸಂಖ್ಯೆಯ ಮಹಿಳಾ ಸದಸ್ಯರಿರಬೇಕು

- ಶಾಲಾ ಮಕ್ಕಳಿಗೆ ಕಲಿಕೆಗೆ ತೊಂದರೆಯುಂಟಾಗುವ ಅಥವಾ ಮುಜುಗರ ಉಂಟಾಗುವ ಯಾವುದೇ ಪ್ರಕರಣಗಳು ನಡೆಯದಂತೆ ಕ್ರಮವಹಿಸಬೇಕು.
- ಹೆಣ್ಣು ಮಕ್ಕಳಿಗೆ ಅಗತ್ಯವಿರುವ ಶೌಚಾಲಯ ವ್ಯವಸ್ಥೆ, ಶುಚಿತ್ವ ನೀರಿನ ಸೌಲಭ್ಯ ಹಾಗೂ ಇತರೆ ಅಂಶಗಳಿಗೆ ಗಮನ ಹರಿಸಿ ಸೌಲಭ್ಯಗಳನ್ನು ಒದಗಿಸುವುದು.
- POCSO ಕಾಯ್ದೆ – 2012ರ ಅಡಿ ಮಕ್ಕಳ ಸುರಕ್ಷತೆಗೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುವುದು.

- ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ಗಮನ ಹರಿಸಿ, ಶಾಲೆಗೆ ಪುನ: ಸೇರಿಸುವ ಬಗ್ಗೆ ಕ್ರಮ ಕೈಗೊಳ್ಳುವುದು.

IV.ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧಿಕಾರಗಳು

- ಶಾಲೆಯು ಸಮರ್ಪಕವಾಗಿ ಕಾರ್ಯ ನಿರ್ವಹಿಸುವುದನ್ನು ಖಾತರಿಪಡಿಸಿಕೊಳ್ಳುವುದು.
- ಶಾಲಾ ಸಿಬ್ಬಂದಿಯ ಸಕಾಲಿಕ ಹಾಗೂ ನಿಯಮಿತ ಹಾಜರಾತಿಯ ಮೇಲೆ ನಿಗಾ ಇಡುವುದು.
- ಶಿಕ್ಷಕರ ಹಾಜರಾತಿ ವಹಿಯನ್ನು ಸದಸ್ಯರು ಶಾಲೆಯಲ್ಲಿಯೇ ಪರಿವೀಕ್ಷಿಸಬಹುದು.
- ಶಾಲಾ ಸಿಬ್ಬಂದಿಯ ಸಕಾಲಿಕ ಹಾಗೂ ನಿಯಮಿತ ಹಾಜರಾತಿಯಲ್ಲಿ ಏನಾದರೂ ದೋಷ ಕಂಡುಬಂದರೆ, ಆ ಬಗ್ಗೆ ಮಾಸಿಕ ಸಭೆಯಲ್ಲಿ ಚರ್ಚಿಸಿ, ಗೊತ್ತುವಳಿ ಅಂಗೀಕರಿಸಿ ಸೂಕ್ತ ಕ್ರಮಕ್ಕೆ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸುವುದು. (ಗೊತ್ತುವಳಿ ಸ್ವೀಕರಿಸಿದ 30 ದಿನಗಳೊಳಗೆ ಮೇಲಾಧಿಕಾರಿಗಳು ತೆಗೆದುಕೊಂಡ ಕ್ರಮದ ಬಗ್ಗೆ ಸದಸ್ಯ ಕಾರ್ಯದರ್ಶಿ ಎಸ್.ಡಿ.ಎಂ.ಸಿ. ಗೆ ತಿಳಿಸಬೇಕು).
- ಒಂದು ಶೈಕ್ಷಣಿಕ ವರ್ಷದಲ್ಲಿ ನಾಲ್ಕು ದಿನ ಮೀರದಂತೆ ಸ್ಥಳೀಯ ರಜೆಗಳನ್ನು ನಿರ್ಧರಿಸುವುದು.
- ನಿರುಪಯುಕ್ತ ವಿಜ್ಞಾನೋಪಕರಣಗಳು, ಕಲಿಕೆಯ ಸಾಧನಗಳು, ಪೀಠೋಪಕರಣಗಳು, ಆಟದ ಸಾಮಗ್ರಿಗಳು, ನಕಾಶೆಗಳು, ಚಾರ್ಟ್‌ಗಳು, ವಾಚನಾಲಯದ ಪುಸ್ತಕಗಳು, ಇತ್ಯಾದಿ ಸಾಮಗ್ರಿಗಳು ಸೇರಿ ವಾರ್ಷಿಕವಾಗಿ ಗರಿಷ್ಠ ಇಪ್ಪತ್ತು ಸಾವಿರ ರೂಪಾಯಿಗಳ ಮಿತಿಯೊಳಗೆ ನಿರುಪಯುಕ್ತವೆಂದು ಘೋಷಿಸಬಹುದು. ಈ ರೀತಿ ಘೋಷಿಸಿದ ವಸ್ತುಗಳನ್ನು ಹರಾಜು ಮಾಡಿ ಬಂದ ಹಣವನ್ನು ಶಾಲೆಯ ಎಸ್.ಡಿ.ಎಂ.ಸಿ. ಖಾತೆಗೆ ಜಮಾ ಮಾಡುವುದು. ನಿಯಮಗಳ ಪ್ರಕಾರ ಕ್ರಮ ವಹಿಸುವುದು.
- ಸಾಂಸ್ಕೃತಿಕ ಚಟುವಟಿಕೆಗಳು, ಆಟೋಟಗಳು, ರಾಜ್ಯದೊಳಗಿನ ಶೈಕ್ಷಣಿಕ ಪ್ರವಾಸಗಳು, ಸಂದರ್ಶನಗಳು ಇತ್ಯಾದಿಗಳನ್ನು ಇಲಾಖಾ ನಿಯಮದಂತೆ ಸಂಘಟಿಸಲು ಅನುಮತಿ ನೀಡುವುದು ಹಾಗೂ ಮಕ್ಕಳ ಸುರಕ್ಷತೆ ಬಗ್ಗೆ ಜಾಗೃತೆ ವಹಿಸುವುದು.
- ಶಾಲೆಯು ದಾನವಾಗಿ ಸ್ವೀಕರಿಸಿದ ಅನುದಾನವನ್ನು ಸಮಾನವಾಗಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ತರಗತಿಗಳಿಗೆ ಉಪಯೋಗಿಸಿಕೊಳ್ಳುವುದು. ಖರ್ಚು ಮಾಡಿದ ಹಣದ ಲೆಕ್ಕಪತ್ರಗಳನ್ನು ಹಾಗೂ ತತ್ಸಂಬಂಧಿಯಾದ ದಾಖಲೆಗಳನ್ನು ಪರಿಶೀಲಿಸುವುದು.

- ವಾಚನಾಲಯ ನಿಧಿ, ಕ್ರೀಡಾ ನಿಧಿ, ಪ್ರಯೋಗಾಲಯ ನಿಧಿ ಇತ್ಯಾದಿ ಸರ್ಕಾರೇತರ ನಿಧಿಗಳ ಬಳಕೆಗೆ ಸಂಬಂಧಿಸಿದಂತೆ ಕಾಲ ಕಾಲಕ್ಕೆ ಸರ್ಕಾರ ಹೊರಡಿಸುವ ನಿಯಮಗಳಿಗೆ ಅನುಸಾರ ಅನುಮೋದನೆಯನ್ನು ನೀಡುವುದು.
- ಶಾಲೆಯ ಜಮೀನಿನಲ್ಲಿ ಬೆಳೆದ ಬೆಳೆಗಳನ್ನು ಅಗತ್ಯವಿದ್ದಷ್ಟು ಮಧ್ಯಾಹ್ನದ ಬಿಸಿಯೂಟಕ್ಕೆ ಬಳಸಿ ಹೆಚ್ಚುವರಿ ಇದ್ದಲ್ಲಿ ಹರಾಜು ಮಾಡಿ ಶಾಲೆಯ ಎಸ್.ಡಿ.ಎಂ.ಸಿ. ಖಾತೆಗೆ ಜಮಾ ಮಾಡುವುದು.
- ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್, ರಾಜ್ಯ ಮತ್ತು ಕೇಂದ್ರ ವಲಯದಿಂದ ಎಸ್.ಡಿ.ಎಂ.ಸಿ ಖಾತೆಗೆ ನಿಯಮಾನುಸಾರ ಬಿಡುಗಡೆಯಾಗುವ ಹಣದಲ್ಲಿ ಶಾಲೆಗೆ ಬೇಕಾಗುವ ಸಾಧನ ಸಾಮಗ್ರಿಗಳನ್ನು ಕೊಂಡುಕೊಳ್ಳಲು ಸಂಬಂಧಿಸಿದ ಮುಖ್ಯ ಶಿಕ್ಷಕರುಗಳಿಗೆ ಅನುಮೋದನೆ ನೀಡುವುದು.

**V. ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಕರ್ತವ್ಯಗಳು**

- ಶಾಲೆಯ ಶೈಕ್ಷಣಿಕ ಚಟುವಟಿಕೆಗಳ ಮೇಲ್ವಿಚಾರಣೆ ಮಾಡುವುದು.
- ಶಾಲಾಭಿವೃದ್ಧಿ ಯೋಜನೆ ಸಿದ್ಧಪಡಿಸುವುದು ಹಾಗೂ ಅನುಷ್ಠಾನಗೊಳಿಸುವುದು.
- ಮಕ್ಕಳಲ್ಲಿನ ಗುಣಮಟ್ಟದ ಕಲಿಕೆಗೆ ಪೂರಕ ವಾತಾವರಣ ನಿರ್ಮಾಣ ಮಾಡಲು ಸಹಕರಿಸುವುದು.
- ಇಲಾಖೆಯಿಂದ ನೀಡಲಾಗುವ ಎಸ್.ಡಿ.ಎಂ.ಸಿ ತರಬೇತಿಯಲ್ಲಿ ಕಡ್ಡಾಯವಾಗಿ ಭಾಗವಹಿಸುವುದು ಮತ್ತು ಅದರಲ್ಲಿನ ಮಾರ್ಗಸೂಚಿಯಂತೆ ಶಾಲಾಭಿವೃದ್ಧಿ ಯೋಜನೆ ಸಿದ್ಧಪಡಿಸುವುದು ಮತ್ತು ಅನುಷ್ಠಾನಗೊಳಿಸುವುದು.
- ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ಯಾವುದೇ ಇತರ ಮೂಲದಿಂದ ಸಂಪನ್ಮೂಲ ಕ್ರೋಢೀಕರಣ ಹಾಗೂ ಸ್ವೀಕರಿಸಿದ ಅನುದಾನಗಳನ್ನು ನಿಯಮಾನುಸಾರ ಶಾಲೆಯ ಅಭಿವೃದ್ಧಿಗೆ ಬಳಸುವುದು.
- ಸರ್ಕಾರ ನಿಗದಿಪಡಿಸಬಹುದಾದ ಇತರೆ ಹೊಣೆಗಾರಿಕೆಗಳನ್ನು ನಿರ್ವಹಿಸುವುದು.

**VI. ಮುಂದುವರಿದು, ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು 2012ರ ಭಾಗ-5ರ ನಿಯಮ 13ರ ಅನ್ವಯ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯು ಮೇಲೆ ನಿರ್ದಿಷ್ಟಪಡಿಸಿದ ಕರ್ತವ್ಯಗಳ ಜೊತೆಗೆ ಈ ಕೆಳಕಂಡ ಕರ್ತವ್ಯಗಳನ್ನು ನಿರ್ವಹಿಸುವುದು.**

1. ಕೆ.ಪಿ.ಎಸ್ ಶಾಲೆಯು ಪೂರ್ವ ಪ್ರಾಥಮಿಕ ಹಂತದಿಂದ 12ನೇ ತರಗತಿಯವರೆಗೆ ಒಳಗೊಂಡಿರುವುದರಿಂದ ನೆರೆಹೊರೆಯ ವ್ಯಾಪ್ತಿಯಲ್ಲಿರುವ ಅರ್ಹ ವಯಸ್ಸಿನ ಎಲ್ಲಾ ಮಕ್ಕಳು ಅರ್ಹ ತರಗತಿಗಳಿಗೆ ದಾಖಲಾಗುವಂತೆ ಕ್ರಮ ವಹಿಸುವುದು

2. ಈ ರೀತಿ ದಾಖಲಾದ ಮಕ್ಕಳು ನಿಯಮಿತವಾಗಿ ಶಾಲೆಗೆ ಹಾಜರಾಗುವಂತೆ ಮೇಲ್ವಿಚಾರಣೆ ಮಾಡುವುದು.
3. ಶಾಲೆ ಬಿಟ್ಟ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಸಹಕರಿಸುವುದು.
4. 12ನೇ ತರಗತಿಯವರೆಗಿನ ಶಿಕ್ಷಣವನ್ನು ಮುಗಿಸಿ ಪದವಿ ಶಿಕ್ಷಣಕ್ಕೆ ದಾಖಲಾಗಲು ಅಗತ್ಯವಿರುವ ಶೈಕ್ಷಣಿಕ ಸಾಮರ್ಥ್ಯವನ್ನು ಹಾಗೂ ಧನಾತ್ಮಕ ಮನೋಭಾವನೆಯನ್ನು ಬೆಳೆಸುವುದರ ಮೂಲಕ ಉನ್ನತ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುವುದು.
5. ಶಾಲೆಯಲ್ಲಿ ವಿವಿಧ ಹಂತಗಳಲ್ಲಿ ಓದುತ್ತಿರುವ ಎಲ್ಲಾ ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆಯಲು ಪೂರಕ ಚಟುವಟಿಕೆಗಳನ್ನು ಆಯೋಜಿಸುವುದು ಹಾಗೂ ದಿವ್ಯಾಂಗ ಅಗತ್ಯವುಳ್ಳ ವಿದ್ಯಾರ್ಥಿಗಳಿಗೆ ಚಟುವಟಿಕೆಗಳು ಹಾಗೂ ಸೌಲಭ್ಯಗಳು ಕಲ್ಪಿಸುವುದು.
6. ಶಿಕ್ಷಣ ಹಕ್ಕು ಕಾಯಿದೆಯ ಕಲಂ 28ರನ್ವಯ ಶಾಲೆಯ ಯಾವುದೇ ಶಿಕ್ಷಕರು ಖಾಸಗಿಯಾಗಿ ಪಾಠ ಬೋಧನೆ ಮಾಡದಿರುವುದನ್ನು ಮಾಡುತ್ತಿಲ್ಲವೆಂಬುದನ್ನು ಖಾತ್ರಿ ಪಡಿಸಿಕೊಳ್ಳುವುದು.
7. ಶಾಲೆಯ ಆವರಣದ ಒತ್ತುವರಿ ಹಾಗೂ ಕಟ್ಟಡದ ಅತಿಕ್ರಮಣಕ್ಕೆ ಅವಕಾಶ ನೀಡದಂತೆ ಮುಂಜಾಗರೂಕತಾ ಕ್ರಮ ತೆಗೆದುಕೊಳ್ಳುವುದು.
8. ಶೈಕ್ಷಣಿಕ ವರ್ಷದಲ್ಲಿ ಕನಿಷ್ಟ 220 ಕಲಿಕಾ ದಿನಗಳು ಮತ್ತು ಪ್ರತಿದಿನ 5 ಗಂಟೆ 30 ನಿಮಿಷಗಳ ಕಾಲ (ಪೂರ್ವ ಸಿದ್ಧತೆ ಒಳಗೊಂಡಂತೆ) ಶಾಲೆ ನಡೆಯುದನ್ನು ಖಾತ್ರಿ ಪಡಿಸಿಕೊಳ್ಳುವುದು.
9. ಶಾಲೆಯಲ್ಲಿ ಓದುತ್ತಿರುವ ಎಲ್ಲಾ ಮಕ್ಕಳಿಗೆ ಸರ್ಕಾರದಿಂದ ನಿಯಮಾನುಸಾರ ಸಿಗಬೇಕಾದ ಉತ್ತೇಜಕಗಳನ್ನು ಸಕಾಲಕ್ಕೆ ಒದಗಿಸಲು ಅಗತ್ಯ ಕ್ರಮವನ್ನು ವಹಿಸುವುದು. (ಉದಾ: ಬೈಸಿಕಲ್, ಬಿಸಿ ಊಟ, ಸಮವಸ್ತ್ರ, ಪಠ್ಯಪುಸ್ತಕ, ನೋಟ್ ಬುಕ್, ಶೂ & ಸಾಕ್ಸ್, ವಿದ್ಯಾರ್ಥಿ ವೇತನ, ಕ್ಷೀರಭಾಗ್ಯ ಇತ್ಯಾದಿ)
10. ಶಾಲೆಯಲ್ಲಿ ಕಲಿಯುತ್ತಿರುವ ಎಲ್ಲಾ ಮಕ್ಕಳಿಗೆ ಇಲಾಖೆಯಿಂದ ಏರ್ಪಡಿಸುವ ಹಂತವಾರು ಕಾರ್ಯಕ್ರಮಗಳ ಸಮರ್ಪಕ ಜಾರಿಗೆ ಸಹಕರಿಸುವುದು. (ವಿಜ್ಞಾನ ಮೇಳ, ಶೈಕ್ಷಣಿಕ ಪ್ರವಾಸ, ಪ್ರತಿಭಾ ಕಾರಂಜಿ, ಸಹಪಠ್ಯ ಚಟುವಟಿಕೆಗಳು, ಕ್ರೀಡಾ ಕೂಟಗಳು, ಶಾಲಾ ಸಂಸತ್ತು, ವಿಜ್ಞಾನ ಕ್ಲಬ್, ಇಕೋಕ್ಲಬ್, ಕಲಾ ಉತ್ಸವ, ಹದಿಹರೆಯದ ಶಿಕ್ಷಣ, ಕರಾಟೆ ಇತ್ಯಾದಿ)
11. ಮಕ್ಕಳ ಹಕ್ಕು ಹಾಗೂ ಮಕ್ಕಳ ಸುರಕ್ಷತೆ ಹಾಗೂ ರಕ್ಷಣೆಗೆ ಕ್ರಮ ವಹಿಸುವುದು.
12. ಶಾಲೆಯ ಅವಶ್ಯಕತೆಗಳಿಗನುಗುಣವಾಗಿ ಶಾಲಾಭಿವೃದ್ಧಿ ಯೋಜನೆ ತಯಾರಿಸಿ, ಅನುಷ್ಠಾನಗೊಳಿಸುವುದು.
13. ವರ್ಷದಲ್ಲಿ ಕನಿಷ್ಠ 3 ಬಾರಿ ಅಂದರೆ ಜೂನ್, ನವೆಂಬರ್ ಹಾಗೂ ಫೆಬ್ರವರಿ ತಿಂಗಳುಗಳಲ್ಲಿ ಪೋಷಕರ ಸಭೆಗಳನ್ನು ಆಯೋಜಿಸುವುದು.

14.ಶಾಲೆಗೆ ಮಂಜೂರಾದ ಅನುದಾನಗಳನ್ನು ನಿಯಮಾನುಸಾರ ಬಳಸಲು ಕಾಲಕಾಲಕ್ಕೆ ಅನುಮೋದನೆ ನೀಡಿ, ಸಮರ್ಪಕವಾಗಿ ಬಳಕೆಯಾಗಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.

15.ಶಾಲಾ ವ್ಯಾಪ್ತಿಯ 100 ಮೀಟರ್ ಅಂತರದೊಳಗೆ ಯಾವುದೇ ಧೂಮಪಾನ, ಮದ್ಯಪಾನ, ಮಾದಕ ವಸ್ತುಗಳ ಮಾರಾಟದ ಅಂಗಡಿ ತೆರೆಯದಿರುವುದನ್ನು ಖಾತರಿಪಡಿಸಿಕೊಳ್ಳುವುದು. ಶಾಲಾ ಆವರಣದಲ್ಲಿ ಕಲಿಕಾ ಪರಿಸರ ಕಲುಷಿತವಾಗದಂತೆ ಕ್ರಮವಹಿಸುವುದು.

16.ಶಾಲಾ ಶಿಕ್ಷಣ ನಿಧಿ ಸ್ಥಾಪಿಸುವುದು, ಶಾಲಾ ಅಭಿವೃದ್ಧಿಗಾಗಿ ಎಸ್.ಡಿ.ಎಂ.ಸಿ ಯು ಸಾರ್ವಜನಿಕರಿಂದ, ದಾನಿಗಳಿಂದ ವಂತಿಗೆಗಳನ್ನು ಸ್ವೀಕರಿಸಬಹುದು. ಸ್ವೀಕರಿಸಿದ ವಂತಿಗೆಗಳಿಗೆ ಸೂಕ್ತ ದಾಖಲೆಗಳನ್ನು ನಿರ್ವಹಿಸುವುದು.

17. ಶಾಲೆಗೆ ಸಂಬಂಧಿಸಿದ ಎಲ್ಲಾ ಕಾಮಗಾರಿಗಳ ನಿರ್ಮಾಣ ಹಾಗೂ ನಿರ್ವಹಣೆಯ ಮೇಲುಸ್ತುವಾರಿಯನ್ನು ಮಾಡಿ, ಸೂಕ್ತ ಮಾರ್ಗದರ್ಶನ ನೀಡುವುದು.

18.ಶಾಲೆಗೆ ಸಂಬಂಧಿಸಿದ ಆಸ್ತಿ ಹಾಗೂ ಕಟ್ಟಡಗಳನ್ನು ಸಂರಕ್ಷಿಸುವುದು.

19.ಶಾಲಾ ವಾರ್ಷಿಕ ಲೆಕ್ಕ ಪತ್ರಗಳ ನಿರ್ವಹಣೆ ಬಗ್ಗೆ ಪರಿಶೀಲಿಸಿ, ಮಾರ್ಚ್ 31ರ ಅಂತ್ಯಕ್ಕೆ ಅಂತಿಮ ವಿವರಗಳನ್ನು ದಾಖಲಿಸುವುದು. ಮುಂದಿನ ಶೈಕ್ಷಣಿಕ ವರ್ಷದ ಜೂನ್ ಮಾಹೆಯ ಮೊದಲ ವಾರದಲ್ಲಿ ಲಭ್ಯವಿರುವ ಅನುದಾನದ ಬಳಕೆಯ ಬಗ್ಗೆ ಸಭೆಯಲ್ಲಿ ಮಂಡಿಸಿ, ಅನುಮೋದನೆ ಪಡೆದು ಇಲಾಖಾ ಸೂಚನೆಗಳಂತೆ ನಿಯಮಾನುಸಾರ ಬಳಸಿಕೊಳ್ಳುವುದು.

20. ಶಿಕ್ಷಕರ ಸಮಸ್ಯೆಗಳ ಬಗ್ಗೆ ಸಭೆಯಲ್ಲಿ ಸಂಬಂಧಪಟ್ಟ ವಿಷಯಗಳ ಬಗ್ಗೆ ಪ್ರಸ್ತಾಪಿಸಿ, ಸ್ಥಳೀಯ ಮಟ್ಟದಲ್ಲಿ ಪರಿಹಾರವನ್ನು ಕಂಡುಕೊಳ್ಳುವುದು. ಇಲಾಖಾ ಮಟ್ಟದ ಸಮಸ್ಯೆಗಳಿದ್ದಲ್ಲಿ ಸಂಬಂಧಪಟ್ಟ ನಿಯಂತ್ರಣ ಪ್ರಾಧಿಕಾರಕ್ಕೆ ಮನವಿ ಸಲ್ಲಿಸುವುದು.

**VII.ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಸದಸ್ಯರ ಸದಸ್ಯತ್ವವು ಈ ಕೆಳಕಂಡ ಯಾವುದೇ ಘಟನೆಗಳು ಸಂಭವಿಸಿದಲ್ಲಿ ರದ್ದಾಗತಕ್ಕದ್ದು.**

1) ಆತ/ಆಕೆ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ನಿರಂತರ ಮೂರು ಸಭೆಗಳಿಗೆ ಗೈರು ಹಾಜರಾದಲ್ಲಿ;
2) ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ವ್ಯಾಪ್ತಿಯಲ್ಲಿ ಬರುವ ಯಾವುದೇ ವ್ಯವಹಾರದ ನಿರ್ವಹಣೆಯಲ್ಲಿ ಆತ/ಆಕೆ ಭ್ರಷ್ಟಾಚಾರದಲ್ಲಿ ತೊಡಗಿದ್ದಲ್ಲಿ;
3) ಯಾವುದೇ ಕಾರಣದ ನಿಮಿತ್ತ ಸದಸ್ಯ ತಂದೆ-ತಾಯಿ-ಪೋಷಕರ ಮಗುವು ಶಾಲೆಯ ವಿದ್ಯಾರ್ಥಿಯಾಗಿರುವುದು ನಿಂತುಹೋದಲ್ಲಿ;
4) ಯಾವುದೇ ನ್ಯಾಯಾಲಯದಿಂದ ಆತ/ಆಕೆಯು ಅಪಾದಿತನೆಂದು ತೀರ್ಮಾನವಾಗಿದ್ದಲ್ಲಿ;

5) ಆತ/ಆಕೆ ಶಾಲೆಯಲ್ಲಿ ಓದುತ್ತಿರುವ ಯಾವುದೇ ಮಗುವಿನ ತಂದೆ-ತಾಯಿ-ಪೋಷಕ ಆಗಿರದಿದ್ದಲ್ಲಿ;

6) ಎಸ್.ಡಿ.ಎಂ.ಸಿ ಅಧ್ಯಕ್ಷರು/ಸದಸ್ಯರು ಅನುಚಿತ ವರ್ತನೆ/ ನಿಯಮಬಾಹಿರ ಚಟುವಟಿಕೆ/ಇತರೆ ಅನೈತಿಕ ಚಟುವಟಿಕೆಗಳಲ್ಲಿ ತೊಡಗಿರುವ ಬಗ್ಗೆ ಸಾಬೀತಾದಲ್ಲಿ ಅವರ ಸದಸ್ಯತ್ವವು ರದ್ದಾಗತಕ್ಕದ್ದು.

**VIII.** ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಕಾಲಾವಧಿ

ಕರ್ನಾಟಕ ಪಬ್ಲಿಕ್ ಶಾಲೆಯ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಕಾಲಾವಧಿ ಮೂರು ವರ್ಷಗಳದ್ದಾಗಿರುತ್ತದೆ. ಎಸ್.ಡಿ.ಎಂ.ಸಿ ಸದಸ್ಯರಾಗಿರುವ ಪೋಷಕರ ಮಕ್ಕಳ ವ್ಯಾಸಂಗವು ಆ ಶಾಲೆಯಲ್ಲಿ ಮುಗಿದ ಕೂಡಲೇ ಸಂಬಂಧಿಸಿದ ಸದಸ್ಯರ ಸದಸ್ಯತ್ವವು ರದ್ದಾಗುವುದು. ಅದೇ ರೀತಿ, ಸದಸ್ಯ ವಿದ್ಯಾರ್ಥಿಗಳ ವ್ಯಾಸಂಗ ಅವಧಿ ಮುಗಿದ ಕೂಡಲೇ ಆ ವಿದ್ಯಾರ್ಥಿಗಳ ಸದಸ್ಯತ್ವವೂ ಸಹ ರದ್ದಾಗುವುದು. ಅದಕ್ಕೆ ಅನುಗುಣವಾಗಿ ಖಾಲಿ ಆಗುವ ಸದಸ್ಯ ಸ್ಥಾನಗಳಿಗೆ ಮರು ಆಯ್ಕೆ ಮಾಡಿಕೊಳ್ಳುವುದು. ಒಟ್ಟಾರೆ ಸದಸ್ಯತ್ವದ ಅವಧಿಯು ಪ್ರಸಕ್ತ ಎಸ್.ಡಿ.ಎಂ.ಸಿ ಮುಕ್ತಾಯವಾಗುವ ಅವಧಿಗೆ ಅಂದರೆ ಮೂರು ವರ್ಷದವರೆಗೆ ಮಾತ್ರ ಇರುತ್ತದೆ. ಮೂರು ಎಸ್.ಡಿ.ಎಂ.ಸಿ ಸಾಮಾನ್ಯ ಸಭೆಗಳಿಗೆ ಸತತವಾಗಿ ಗೈರುಹಾಜರಾದ ಸದಸ್ಯರ, ಸದಸತ್ವವನ್ನು ನಿಯಮಗಳ ಪ್ರಕಾರ ರದ್ದುಪಡಿಸಲಾಗುವುದು.

**IX.** ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಸಭೆಗಳು ಮತ್ತು ನಡೆಸುವ ವಿಧಾನ

1. ಕನಿಷ್ಟ ತಿಂಗಳಿಗೊಮ್ಮೆ ಎಸ್.ಡಿ.ಎಂ.ಸಿ ಸಭೆಯನ್ನು ನಡೆಸಬೇಕು.
2. ಸಭೆಯನ್ನು ಆಯೋಜಿಸಲು ಅಧ್ಯಕ್ಷರನ್ನು ಸಂಪರ್ಕಿಸಿ ಅವರ ಸೂಚನೆಯಂತೆ ಸಭೆಯನ್ನು ಆಯೋಜಿಸುವದು.
3. ಸಭೆಯ ಸೂಚನಾ ಪತ್ರವನ್ನು ಅಜೆಂಡಾದೊಂದಿಗೆ ಕನಿಷ್ಟ ಆರು ಕಾರ್ಯನಿರತ ದಿನಗಳ ಮುಂಚಿತವಾಗಿ ಎಲ್ಲಾ ಸದಸ್ಯರಿಗೂ ಕಳುಹಿಸತಕ್ಕದ್ದು.
4. ಸಭೆ ನಡೆಸಲು ಒಟ್ಟು ಸದಸ್ಯರಲ್ಲಿ ಕನಿಷ್ಟ 2/3 ರಷ್ಟು ಹಾಜರಾತಿ ಇರುಬೇಕು.
5. ಕೋರಂ ಕೊರತೆಯಿಂದಾಗಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು ನೆಡಸಲಾಗದಿದ್ದರೆ, ಆಗ ಸದರಿ ದಿನಾಂಕದಿಂದ ನಾಲ್ಕು ದಿನಗಳಿಗಿಂತ ಹೆಚ್ಚಿಲ್ಲದ ಸದಸ್ಯ ಕಾರ್ಯದರ್ಶಿ ಅಧಿಸೂಚಿಸುವ ಮತ್ತೊಂದು ದಿನಾಂಕಕ್ಕೆ ಸಭೆಯನ್ನು ಮುಂದೂಡಬಹುದು.
6. ಮುಂದೂಡಲ್ಪಟ್ಟ ಸಭೆಯು ಸಹ ಅಗತ್ಯ ಕೋರಂನ್ನು ಹೊಂದಿರದಿದ್ದಲ್ಲಿ, ಆಗ ವಾಸ್ತವವಾಗಿ ಹಾಜರಿರುವ ಸದಸ್ಯರ ಕೋರಂ ಸಾಕಾಗುತ್ತದೆ.
7. ಸಭೆಗೆ ಎಸ್.ಡಿ.ಎಂ.ಸಿ ಯ ಅಧ್ಯಕ್ಷರು ಗೈರು ಹಾಜರಾಗಿದ್ದಲ್ಲಿ ಉಪಾಧ್ಯಕ್ಷರು ಆ ಸಭೆಯ ಅಧ್ಯಕ್ಷರಾಗುವರು.

8. ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಇಬ್ಬರೂ ಸಹ ಗೈರು ಹಾಜರಾಗಿದ್ದು, ಕೋರಂ ಇದ್ದಲ್ಲಿ ಸಭೆಯು ತೀರ್ಮಾನಿಸುವ ಒಬ್ಬ ಸದಸ್ಯರು ಸದರಿ ಸಭೆಯ ಅಧ್ಯಕ್ಷತೆ ವಹಿಸಬಹುದಾಗಿದೆ.

9. ಸಭೆಯ ಆರಂಭದಲ್ಲಿ ಹಿಂದಿನ ಸಭೆಯ ನಡವಳಿಗಳನ್ನು ಓದಿ ದಾಖಲಿಸುವುದು.

10. ಸಭೆಯ ಕಾರ್ಯಸೂಚಿಯಲ್ಲಿರುವ ವಿಷಯಗಳನ್ನು ಪ್ರಸ್ತಾಪಿಸಿ, ಚರ್ಚಿಸಿ ಸೂಕ್ತವಾದ ತೀರ್ಮಾನಗಳನ್ನು ತೆಗೆದುಕೊಳ್ಳುವುದು.

11. ತೀರ್ಮಾನಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಮತ್ತು ಕಾಲಮಿತಿಯನ್ನು ನಿಗಧಿಗೊಳಿಸುವುದು.

12. ಸಭೆಯ ನಡವಳಿಗಳನ್ನು ಎಸ್.ಡಿ.ಎಂ.ಸಿ ಸಭಾ ನಡವಳಿಯ ಪುಸ್ತಕದಲ್ಲಿ ದಾಖಲಿಸಿ ಎಲ್ಲರ ಸಹಿಯನ್ನು ಪಡೆಯುವುದು.

13.ಸಭಾ ನಡವಳಿಗಳನ್ನು ಸಾರ್ವಜನಿಕರಿಗೆ ಲಭ್ಯವಾಗುವಂತೆ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ಸಭಾ ನಡವಳಿಯನ್ನು ಗ್ರಾಮ ಪಂಚಾಯಿತಿ/ಪುರ ಸಭೆ/ಪಟ್ಟಣ ಪಂಚಾಯಿತಿ/ನಗರ ಸಭೆ ಇಲ್ಲಿಗೆ ಕಳುಹಿಸಿ ಶಾಲೆಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಸಂಬಂಧ ಕೋರುವುದು. ಸಭಾ ನಡವಳಿಗಳು ಗ್ರಾಮ ಪಂಚಾಯಿತಿ/ಪುರ ಸಭೆ/ಪಟ್ಟಣ ಪಂಚಾಯಿತಿ/ನಗರ ಸಭೆ ಸೂಚನಾ ಫಲಕದಲ್ಲಿ ಹಾಗೂ ಶಾಲಾ ವತಿಯಿಂದ ಶಾಲಾ ಅಂತರ್ಜಾಲ ಸೃಷ್ಟಿಸಿ, ಸಾರ್ವಜನಿಕರಿಗೆ ಲಭ್ಯವಾಗುವಂತೆ ಕ್ರಮವಹಿಸುವುದು. ಇಲಾಖೆಗೆ ಸಂಬಂಧಿಸಿದಂತೆ ಮಾಹಿತಿಯನ್ನು ಸಂಬಂಧಪಟ್ಟವರಿಗೆ ಸಲ್ಲಿಸುವುದು.

14.ಸಭೆಯಲ್ಲಿ ತೆಗೆದುಕೊಂಡ ತೀರ್ಮಾನಗಳನ್ನು ಜಾರಿಗೊಳಿಸಲು ಕ್ರಮವಹಿಸಿ ಮುಂದಿನ ಸಭೆಯಲ್ಲಿ ಅನುಪಾಲನಾ ವರದಿಯನ್ನು ಮಂಡಿಸುವುದು.

**X. ಜಂಟಿ ಬ್ಯಾಂಕ್ ಖಾತೆ ನಿರ್ವಹಣೆ :**

ಕೆ.ಪಿ.ಎಸ್.ನ ಎಸ್.ಡಿ.ಎಂ.ಸಿ ಬ್ಯಾಂಕ್ ಖಾತೆಯನ್ನು ಅಧ್ಯಕ್ಷರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಂಟಿಯಾಗಿ ನಿರ್ವಹಿಸುವುದು.

ಸದರಿ ಬ್ಯಾಂಕ್ ಖಾತೆಯಿಂದ ಯಾವುದೇ ಹಣ ಸೆಳೆಯುವುದು, ಚೆಕ್ ಅಥವಾ ಇತರೆ ಯಾವುದೇ ಸಾಧನ/ತಂತ್ರದ ಮೂಲಕ ಪಾವತಿಸುವುದಕ್ಕೆ ಇಬ್ಬರ ರುಜುವು ಕಡ್ಡಾಯವಾಗಿರಬೇಕು. ಜಂಟಿ ಖಾತೆಯನ್ನು ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ತೆರೆಯುವುದು.

ಕೆ.ಪಿ.ಎಸ್.ಶಾಲೆಗಳಲ್ಲಿ ಈ ರೀತಿ ಹೊಸದಾಗಿ ಎಸ್.ಡಿ.ಎಂ.ಸಿ ರಚನೆಯಾದ ನಂತರ ಪ್ರಸ್ತುತ ಇರುವ ಅಧೀನ ಘಟಕಗಳ(ಪ್ರಾಥಮಿಕ ಹಾಗೂ ಪ್ರೌಢ) ಎಸ್.ಡಿ.ಎಂ.ಸಿ.ಗಳು ರದ್ದಾಗುತ್ತವೆ. ಪದವಿ ಪೂರ್ವ ಕಾಲೇಜುಗಳಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಗಳಿದ್ದು, ಈ ಆದೇಶದ ನಂತರ ಸದರಿ ಸಮಿತಿಗಳು ಸಹ ರದ್ದಾಗುತ್ತವೆ. ಈಗಾಗಲೇ ಜಂಟಿ ಖಾತೆಗಳನ್ನು ತೆರೆದಿರುವ ಪ್ರಾಥಮಿಕ, ಪ್ರೌಢಶಾಲೆಗಳ ಹಾಗೂ ಪದವಿಪೂರ್ವ ಕಾಲೇಜು ಬ್ಯಾಂಕ್ ಖಾತೆಗಳ ಅನುದಾನ ಬಳಕೆಯ ಕುರಿತು ಲೆಕ್ಕಪರಿಶೋಧನೆ ಮಾಡಿ ಖಾತೆಗಳನ್ನು ಮುಕ್ತಾಯಗೊಳಿಸಿ, ಸದರಿ ಖಾತೆಗಳಲ್ಲಿರುವ ಉಳಿಕೆ

79367/2021 ಅನುದಾನಗಳನ್ನು "ಕೆ.ಪಿ.ಎಸ್ ಶಾಲೆಯ ಎಸ್.ಡಿ.ಎಂ.ಸಿ ಬ್ಯಾಂಕ್ ಖಾತೆಗೆ ವರ್ಗಾಯಿಸುವುದು". ಇದರ ಸಂಬಂಧ ಸ್ಥಿರ ಠೇವಣಿಗೆ ಬಂದಿರುವ ಬಡ್ಡಿ ಹಣವನ್ನು ಸಂಬಂಧಪಟ್ಟ ಸರ್ಕಾರದ ಲೆಕ್ಕಶೀರ್ಷಿಕೆಗೆ ಜಮಾ ಮಾಡುವುದು. ಶಾಲೆಯಲ್ಲಿ ಏಕ ಬ್ಯಾಂಕ್ ಖಾತೆಯನ್ನು ನಿರ್ವಹಿಸುವುದು.

ಸದರಿ ನಡವಳಿಗಳು ಕೆ.ಪಿ.ಎಸ್. ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಕುರಿತು ಸರ್ಕಾರವು ಆಗಿಂದಾಗ್ಯೆ ಹೊರಡಿಸುವ ಆದೇಶಗಳು ಮತ್ತು ಸುತ್ತೋಲೆಗಳಿಗೆ ಬದ್ಧವಾಗಿರುತ್ತವೆ.

ಕರ್ನಾಟಕ ಸಾರ್ವಜನಿಕ ಖರೀದಿಯಲ್ಲಿ ಪಾರದರ್ಶಕತೆ ಅಧಿನಿಯಮ-1999ರ ನಿಯಮಗಳನ್ನು ಚಾಚೂ ತಪ್ಪದೆ ಪಾಲಿಸತಕ್ಕದ್ದು.

ಸರ್ಕಾರದಿಂದ ಬಿಡುಗಡೆಯಾದ ಅನುದಾನಕ್ಕೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸೂಕ್ತ ಲೆಕ್ಕ ಪತ್ರಗಳನ್ನು ಇಡತಕ್ಕದ್ದು.

ಭರಿಸಲಾದ ವೆಚ್ಚದ ವಿವರಗಳನ್ನು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಅವಲೋಕನ (New Digital Supportive System) ತಂತ್ರಾಂಶದಲ್ಲಿ ಇಂದೀಕರಿಸಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ; ಎಫ್.ಡಿ 01 ಟಿ.ಎಫ್.ಪಿ 2021 ದಿನಾಂಕ:30.09.2021ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

26.10.2021

(ಎಸ್.ಆರ್.ಎಸ್.ನಾಧನ್)
ವಿಶೇಷಾಧಿಕಾರಿ ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

ಇವರಿಗೆ,

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.

I/179367/2021 3. ಅಪರ ಅಯುಕ್ತರು, ಧಾರವಡ ಮತ್ತು ಕಲಬುರಗಿ ವಿಭಾಗ.

4. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ/ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

5. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.ನಿರ್ದೇಶಕರು (ಪ್ರಾಥಮಿಕ ಶಿಕ್ಷಣ/ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

6. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.

7. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.

8. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ( ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮೂಲಕ.

9. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ.

01.ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

02.ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು (ಸಚಿವ ಸಂಪುಟ) ಶಾಖೆ, ವಿಧಾನಸೌಧ, ಬೆಂಗಳೂರು.

03.ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದಿ ಆಯುಕ್ತರು, ಇವರ ಅಪ್ತ ಕಾರ್ಯದರ್ಶಿ ಬೆಂಗಳೂರು.

04.ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು

(12)

# ಸಮಗ್ರ ಶಿಕ್ಷಣ ಕರ್ನಾಟಕ

**ರಾಜ್ಯ ಯೋಜನಾ ನಿರ್ದೇಶಕರ ಕಚೇರಿ, ಹೊಸ ಸಾರ್ವಜನಿಕ ಕಚೇರಿಗಳ ಪೂರಕ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ: 11565/ಸ.ಶಿ.ಕ/ತ/ಕೆ.ಪಿ.ಎಸ್/ಎಸ್.ಡಿ.ಎಂ.ಸಿ/ ರಚನೆ/2021-22 ದಿನಾಂಕ: 08.02.2022.

**ಸುತ್ತೋಲೆ**

ವಿಷಯ:- ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿನ (ಕೆ.ಪಿ.ಎಸ್) ವ್ಯಾಪ್ತಿಯ ವಿಧಾನ ಸಭಾ ಸದಸ್ಯರನ್ನು (ಶಾಸಕರು) ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ.) ಯ ಅಧ್ಯಕ್ಷರನ್ನಾಗಿ ನೇಮಿಸುವ ಬಗ್ಗೆ.

ಉಲ್ಲೇಖ:-
1. ಸರ್ಕಾರದ ತಿದ್ದುಪಡಿ ಪತ್ರ ಸಂಖ್ಯೆ: ಇಪಿ 142 ಯೋಸಕ 2021, ದಿನಾಂಕ:31.01.2022.
2. ಸರ್ಕಾರಿ ಆದೇಶ ಸಂಖ್ಯೆ: ಇಪಿ 142 ಯೋಸಕ 2021 ಬೆಂಗಳೂರು, ದಿನಾಂಕ:26.10.2021 ರ ಆದೇಶ.

ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿನ ಎಸ್.ಡಿ.ಎಂ.ಸಿ ಸಮಿತಿಯ ರಚನೆ ಕುರಿತು ಉಲ್ಲೇಖ-1 ರನ್ವಯ ಕರ್ನಾಟಕ ಪಬ್ಲಿಕ್ ಶಾಲೆಯ ವ್ಯಾಪ್ತಿಯ ಮಾನ್ಯ ವಿಧಾನ ಸಭಾ ಸದಸ್ಯರು ಶಾಲಾಭಿವೃದ್ಧಿ ಮತ್ತು ಮೇಲುಸ್ತವಾರಿ ಸಮಿತಿಯ ಅಧ್ಯಕ್ಷರಾದಲ್ಲಿ ಶಾಲೆಗಳ ಅಭಿವೃದ್ಧಿಗೆ ಅನುಕೂಲವಾಗುತ್ತದೆ ಎಂಬ ಉದ್ದೇಶದಿಂದ ಉಲ್ಲೇಖ-2 ರ ಸರ್ಕಾರಿ ಆದೇಶ ಸಂಖ್ಯೆ: ಇಪಿ 142 ಯೋಸಕ 2021 ಬೆಂಗಳೂರು, ದಿನಾಂಕ:26.10.2021 ರ ಆದೇಶದಲ್ಲಿ ಈ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ.

1. ಕರ್ನಾಟಕ ಪಬ್ಲಿಕ್ ಶಾಲಾ (ಕೆ.ಪಿ.ಎಸ್) ವ್ಯಾಪ್ತಿಯ ವಿಧಾನ ಸಭಾ ಸದಸ್ಯರನ್ನು (ಶಾಸಕರು) ಅಧ್ಯಕ್ಷರು ಎಂದು ನೇಮಿಸಿ ಪರಿಷ್ಕೃತ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು ರಚಿಸುವುದು.
2. ಉಳಿದಂತೆ ಸರ್ಕಾರಿ ಆದೇಶ ಸಂಖ್ಯೆ: ಇಪಿ 142 ಯೋಸಕ 2021 ಬೆಂಗಳೂರು, ದಿನಾಂಕ:26.10.2021 ರ ಆದೇಶದಲ್ಲಿನ ಎಲ್ಲಾ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ರಾಜ್ಯ ಯೋಜನಾ ನಿರ್ದೇಶಕರು
ಸಮಗ್ರ ಶಿಕ್ಷಣ ಕರ್ನಾಟಕ
ಬೆಂಗಳೂರು.

9/2/22

ಅಡಕಗಳು:-

1. ಸರ್ಕಾರದ ತಿದ್ದುಪಡಿ ಆದೇಶದ ಪ್ರತಿ.

ಅಗತ್ಯ ಕ್ರಮಕ್ಕಾಗಿ:-

1. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಹೊಸಕೆರೆ ಹಳ್ಳಿ, ಬನಶಂಕರಿ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) ಸಾ.ಶಿ.ಇ ರವರಿಗೆ ಕಳುಹಿಸುತ್ತಾ, ತಮ್ಮ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಎಲ್ಲಾ ಕರ್ನಾಟಕ ಪಬ್ಲಿಕ್ ಶಾಲೆಗಳ ಪ್ರಾಂಶುಪಾಲರಿಗೆ ತಲುಪಿಸುವುದು.
3. ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು(ಅಭಿವೃದ್ಧಿ), ಡಯಟ್, ಸಾ.ಶಿ.ಇ ರವರಿಗೆ.
4. ರಾಜ್ಯದ ಎಲ್ಲಾ ಜಿಲ್ಲೆಗಳ ಡಿ.ವೈ.ಪಿ.ಸಿ, ಸಾ.ಶಿ.ಇ.ರವರಿಗೆ.

ಪ್ರತಿಯನ್ನು ಮಾಹಿತಿಗಾಗಿ:-

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ.
2. ಮಾನ್ಯ ಆಯುಕ್ತರು, ಸಾ.ಶಿ.ಇ, ಬೆಂಗಳೂರು ರವರಿಗೆ
3. ಅಪರ ಆಯುಕ್ತರು, ಸಾ.ಶಿ.ಇ, ಧಾರವಾಡ ಮತ್ತು ಕಲಬುರ್ಗಿ ರವರಿಗೆ.
4. ಕಛೇರಿ ಪ್ರತಿ.

ಅನುಬಂಧ - 06 (10)

ಕರ್ನಾಟಕ ಸರ್ಕಾರ

ಸಂಖ್ಯೆ: ಇಪಿ 142 ಯೋಆಕಾಕ 2021.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:31.01.2022.

## ತಿದ್ದುಪಡಿ

ಕರ್ನಾಟಕ ಪಬ್ಲಿಕ್ ಶಾಲೆಗಳ ಶಾಲಾಭಿವೃಧಿ ಮತ್ತು ಮೇಲುಸ್ತುವಾರಿ ಸಮಿತಿಗೆ ಸಂಬಂಧಿಸಿದ ಶಾಲೆಯ ವ್ಯಾಪ್ತಿಯ ಮಾನ್ಯ ವಿಧಾನ ಸಭಾ ಸದಸ್ಯರು ಅಧ್ಯಕ್ಷರಾದಲ್ಲಿ ಶಾಲೆಗಳ ಅಭಿವೃಧಿಗೆ ಅನುಕೂಲವಾಗುತ್ತದೆ ಎಂಬ ಉದ್ದೇಶದಿಂದ ಇದೇ ಸಮ ಸಂಖ್ಯೆಯ ಸರ್ಕಾರಿ ಆದೇಶ ದಿನಾಂಕ:26.10.2021ರ ಆದೇಶ ಭಾಗದ ಕ್ರಮ ಸಂಖ್ಯೆ: II ರಲ್ಲಿ ಕೆ.ಪಿ.ಎಸ್ ಶಾಲೆಗಳಲ್ಲಿ ಎಸ್.ಡಿ.ಎಂ.ಸಿ ರಚನೆ ಕುರಿತು ಈ ಕೆಳಕಂಡಂತೆ ತಿದ್ದಿ ಓದಿಕೊಳ್ಳತಕ್ಕದ್ದು.

| ಕ್ರ.ಸ | ವಿಷಯ | ಪ್ರಸ್ತುತ ಇರುವುದು. | ತಿದ್ದಿ ಓದಿಕೊಳ್ಳತಕ್ಕದ್ದು |
|---|---|---|---|
| | ಕರ್ನಾಟಕ ಪಬ್ಲಿಕ್ ಶಾಲೆಗಳ ಎಸ್.ಡಿ.ಎಂ.ಸಿ ರಚನೆ / ವಿನ್ಯಾಸ ಕುರಿತು. | ಗೌರವ ಅಧ್ಯಕ್ಷರು: ಕೆ.ಪಿ.ಎಸ್ ಶಾಲೆಯ ಸನ್ಮಾನ್ಯ ಶಾಸಕರು. | ಕರ್ನಾಟಕ ಪಬ್ಲಿಕ್ ಶಾಲಾ (ಕೆ.ಪಿ.ಎಸ್) ವ್ಯಾಪ್ತಿಯ ವಿಧಾನ ಸಭಾ ಸದಸ್ಯರನ್ನು (ಶಾಸಕರು) ಅಧ್ಯಕ್ಷರು ಎಂದು ನೇಮಿಸಿ ಪರಿಷ್ಕೃತ ಶಾಲಾಭಿವೃಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು (S.D.M.C) ರಚಿಸುವುದು. |

ಈ ಕುರಿತು ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಇವರು ಕೂಡಲೇ ಸುತ್ತೋಲೆಯನ್ನು ಹೊರಡಿಸುವುದು. ಉಳಿದಂತೆ, ದಿನಾಂಕ:26.10.2021ರ ಆದೇಶದಲ್ಲಿನ ಎಲ್ಲಾ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

31.01.2022

(ಎಸ್.ಆರ್.ಎಸ್.ನಾಥನ್)
ವಿಶೇಷಾಧಿಕಾರಿ ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, (ಆಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
4. ಅಪರ ಅಯುಕ್ತರು, ಧಾರವಡ ಮತ್ತು ಕಲಬುರಗಿ ವಿಭಾಗ.
5. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
6. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ/ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
8. ಸರ್ಕಾರದ ಉಪಕಾರ್ಯದರ್ಶಿ–2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
9. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ.

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು
3. ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.